ಕನ್ನಡಪ್ರಭ
ಶನಿವಾರ 9.05.2026

25ನೇ ವರ್ಷದ ಸಂಭ್ರಮ
ಕರಾವಳಿ ಪ್ರಭಾವಳಿ

ಗರಿಷ್ಠ 31 c | ಕನಿಷ್ಠ 20 c

12ರಂದು ಸಿಎನ್‌ಸಿ 48 ಗಂಟೆಗಳ ಅಹೋರಾತ್ರಿ ಸತ್ಯಾಗ್ರಹ ಆರಂಭ

ಕೊಡವರಿಗೆ ಪ್ರತ್ಯೇಕ ವಿಧಾನಸಭೆ, ಲೋಕಸಭೆ ಕ್ಷೇತ್ರಕ್ಕೆ ಆಗ್ರಹಿಸಿ ಹೋರಾಡಲು ನಿರ್ಧಾರ

• **ಕನ್ನಡಪ್ರಭ ವಾರ್ತೆ** ಮಡಿಕೇರಿ
ಕ್ಷೇತ್ರ ಪುನರ್‌ವಿಂಗಡಣೆಯ ಸಂದರ್ಭ ಕೊಡವರಿಗೆ ಪ್ರತ್ಯೇಕ ವಿಧಾನಸಭೆ ಮತ್ತು ಲೋಕಸಭಾ ಕ್ಷೇತ್ರವನ್ನು ರಚಿಸಬೇಕೆಂದು ಆಗ್ರಹಿಸಿ 48 ಗಂಟೆಗಳ ಕಾಲ ಅಹೋರಾತ್ರಿ ಸತ್ಯಾಗ್ರಹ ನಡೆಸಲು ಕೊಡವ ನ್ಯಾಷನಲ್ ಕೌನ್ಸಿಲ್ ಸಂಘಟನೆ ನಿರ್ಧರಿಸಿದೆ.

ಮಡಿಕೇರಿಯ ಕೊಡವ ಮಂದ್ ನಲ್ಲಿ ಮೇ 12ರಂದು ಬೆಳಿಗ್ಗೆ 10.30ರಿಂದ ಮೇ 14ರಂದು ಬೆಳಿಗ್ಗೆ 10.30ರವರೆಗೆ ಸತ್ಯಾಗ್ರಹ ನಡೆಸಲಾಗುವುದು. ಇದರಲ್ಲಿ ವಿವಿಧ ಹಕ್ಕೋತ್ತಾಯಗಳನ್ನು ಮಂಡಿಸಿ, ಕೊಡವರಿಗೆ ಪ್ರತ್ಯೇಕ ವಿಧಾನಸಭೆ ಮತ್ತು ಲೋಕಸಭೆ ಕ್ಷೇತ್ರ ನೀಡಬೇಕೆಂದು ಆಗ್ರಹಿಸಿರುವ ಮನವಿ ಪತ್ರವನ್ನು ಭಾರತದ ರಾಷ್ಟ್ರಪತಿ, ಪ್ರಧಾನಮಂತ್ರಿ ಹಾಗೂ ಮುಖ್ಯ ಚುನಾವಣಾ ಆಯುಕ್ತರಿಗೆ ಸಲ್ಲಿಸಲಾಗುವುದು ಎಂದು ಸಿಎನ್‌ಸಿ ಅಧ್ಯಕ್ಷ ಎನ್.ಯು.ನಾಚಪ್ಪ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

■ ಕೊಡವರಿಗೆ ಮಾತ್ರ ಮೀಸಲಾದ 'ವಿಶೇಷ ಸಂಸದೀಯ ಮತ್ತು ವಿಧಾನಸಭಾ ಕ್ಷೇತ್ರ 'ಗಳನ್ನು ನೀಡಬೇಕು ಅಥವಾ ಸಿಕ್ಕಿಂನ 'ಸಂಘ' ಕ್ಷೇತ್ರದ ಮಾದರಿಯಲ್ಲಿ ಕೊಡವ ಕ್ಷೇತ್ರಗಳನ್ನು ಸೃಷ್ಟಿಸ ಬೇಕು. ಶೇ.33ರ ಮಹಿಳಾ ಮೀಸಲಾತಿ ಯೊಳಗೆ ಕೊಡವ ಮಹಿಳೆಯರಿಗೆ ಒಳ ಮೀಸಲಾತಿ ನೀಡ ಬೇಕು ಎಂದು ಆಗ್ರಹಿಸಲಾಗುವುದು.

2027ರ ಜನಗಣತಿ ಸಂದರ್ಭ ಕೊಡವರಿಗೆ ಪ್ರತ್ಯೇಕ 'ಕೋಡ್' ಮತ್ತು ಕಾಲಂ ನೀಡಬೇಕು. 1871-1931ರವರೆಗೆ ಇದ್ದಂತೆ ಸ್ವತಂತ್ರ ಜನಾಂಗ ಎಂದು ದಾಖಲಿಸ ಬೇಕು. ವಿಧಿ 25 ಮತ್ತು 26ರ ಅಡಿಯಲ್ಲಿ 'ಗನ್-ತೋಕ್' (ಶಸ್ತ್ರಾಚರಣೆ) ಧಾರ್ಮಿಕ ಹಕ್ಕನ್ನು ರಕ್ಷಿಸಬೇಕು. ಕೊಡವ ಭಾಷೆಯನ್ನು 8ನೇ ಶೆಡ್ಯೂಲ್ ಗೆ ಸೇರಿಸಿ ಶಾಸ್ತ್ರೀಯ ಭಾಷಾ ಸ್ಥಾನಮಾನ ನೀಡಬೇಕು.

ತಲಕಾವೇರಿಯನ್ನು ಕೊಡವರ ಪವಿತ್ರ ಯಾತ್ರಾಸ್ಥಳ ಎಂದು ಘೋಷಿಸಬೇಕು. ಕೊಡವ ಜನಾಂಗೀಯ ಹೆಗ್ಗುರುತು, ಅಪೂರ್ವ ಜಾನಪದ ಪರಂಪರೆಗಳ ನಿಧಿಯಾದಮಂದ್‌ಮತ್ತುದೇವಕಾಡುಗಳನ್ನು ಯುನೆಸ್ಕೋ ಸಾಂಸ್ಕೃತಿಕ ಪರಂಪರೆಯ ಪಟ್ಟಿಗೆ ಸೇರಿಸಬೇಕು. ಕೆಳದಿ ಅರಸರು ಹಾಗೂ ಬ್ರಿಟಿಷರು ವಶಪಡಿಸಿಕೊಂಡ ಮತ್ತು ಹೊರಗಿನವರಿಗೆ ಲೀಸ್ ಅಥವಾ ಮಾರಾಟ ಮಾಡಿದ ಜಮ್ಮಾಮಲೆ ಮತ್ತು ಇತರ ವಂಶಪಾರಂಪರ್ಯ ಭೂಮಿಯನ್ನು ವಿಶ್ವ ರಾಷ್ಟ್ರ ಸಂಸ್ಥೆಯ ಆದಿಮ ಸಂಜಾತ ಆಸ್ತಿ ಕಾಯ್ದೆಯಡಿ ಮರಳಿಸಬೇಕು.

1785ರ ದೇವಟ್‌ಪರಂಬ್ ಜನಾಂಗೀಯ ಹತ್ಯೆ ಮತ್ತು ನಾಲ್ನಾಡ್ ಹಾಗೂ ಮಡಿಕೇರಿ ಕೋಟೆಯಲ್ಲಿ ನಡೆದ ಅರಮನೆ ಹತ್ಯಾಕಾಂಡಗಳನ್ನು ಅಂತರಾಷ್ಟ್ರೀಯ ಸ್ಮಾರಕಗಳಾಗಿ ಗುರುತಿಸಬೇಕು. ಉಲುಗುಲಿ, ಮುಳ್ಳುಸೋಗೆ ಮತ್ತು ಲಕ್ಕಡಿ ಕೋಟೆಗಳಲ್ಲಿ ಕೊಡವ ಯುದ್ಧ ಸ್ಮಾರಕಗಳನ್ನು ನಿರ್ಮಿಸಬೇಕು.

ಹೆಲ್ಸಿಂಕಿ ನಿಯಮಗಳು 1966ರ ಪ್ರಕಾರ ಕೊಡವ ಭೂಪ್ರದೇಶಕ್ಕೆ ಕಾವೇರಿ ನೀರಿನ ಪಾಲು ನೀಡಬೇಕು. ಕೊಡವ ಇತಿಹಾಸವನ್ನು ಸುಳ್ಳಾಗಿಸಿದ ಇತಿಹಾಸಕಾರನ ವಿರುದ್ಧ ಕ್ರಮ ಕೈಗೊಳ್ಳಬೇಕು ಸೇರಿದಂತೆ ವಿವಿಧ ಹಕ್ಕೊತ್ತಾಯಗಳನ್ನು ಆಡಳಿತ ವ್ಯವಸ್ಥೆಯ ಮುಂದಿಡುವುದಾಗಿ ಎನ್.ಯು.ನಾಚಪ್ಪ ತಿಳಿಸಿದ್ದಾರೆ.

'ಹೊಸ ಸೆಂಟ್ರಲ್ ವಿಸ್ಟಾ ಸಂಸತ್ತಿನಲ್ಲಿ 1200ಕ್ಕೂ ಹೆಚ್ಚು ಸೀಟುಗಳಿವೆ. ರಾಷ್ಟ್ರ ಸೇವೆ ಮಾಡಿದ ಮತ್ತು ಜನಸಂಖ್ಯೆ ನಿಯಂತ್ರಿಸಿದ ಕೊಡವರನ್ನು ಶಿಕ್ಷಿಸಬೇಡಿ' ಎಂದು ಆಗ್ರಹಿಸಿದ್ದಾರೆ.

ವಾಲ್ಮೀಕಿ ಪತ್ತಿನ ಸಹಕಾರ ಸಂಘ ಅಧ್ಯಕ್ಷರಾಗಿ ಅಶೋಕ್ ಆಯ್ಕೆ



ನೂತನ ಅಧ್ಯಕ್ಷರು ಉಪಾಧ್ಯಕ್ಷರು ಮತ್ತು ನಿರ್ದೇಶಕರ ಆಯ್ಕೆ ನಡೆಯಿತು.

• **ಕನ್ನಡಪ್ರಭ ವಾರ್ತೆ** ಕುಶಾಲನಗರ
ಶ್ರೀ ಮಹರ್ಷಿ ವಾಲ್ಮೀಕಿ ಪತ್ತಿನ ಸಹಕಾರ ಸಂಘದ ನೂತನ ಆಡಳಿತ ಮಂಡಳಿಯ ಅಧ್ಯಕ್ಷರಾಗಿ ಕೆ ಎನ್ ಅಶೋಕ್ ಅವಿರೋಧವಾಗಿ ಆಯ್ಕೆಗೊಂಡಿದ್ದಾರೆ.

ಕುಶಾಲನಗರದ ಸಹಕಾರ ಸಂಘದ ಕಚೇರಿಯಲ್ಲಿ ನಡೆದ ನೂತನ ಆಡಳಿತ ಮಂಡಳಿ ಚುನಾವಣೆಯಲ್ಲಿ ಉಪಾಧ್ಯಕ್ಷರಾಗಿ ಪಿ ಟಿ ಸುರೇಶ್, ನಿರ್ದೇಶಕರಾಗಿ ಎಂ ಜಿ ಕರಿಯಪ್ಪ, ಸಿ ಸಿದ್ದಲಿಂಗಯ್ಯ, ವೈ.ಟಿ. ಪರಮೇಶ್, ಬಿ.ಎಸ್. ಚಂದನ್ ಕುಮಾರ್, ಕೆ.ಆರ್. ಕೃಷ್ಣ, ಶ್ರೀನಿವಾಸ್ ಕುಮಾರ್ ಎನ್., ಮಂಜುನಾಥ ಎಸ್.ಎಸ್., ಪಿ.ಪಿ. ಸುರೇಶ್, ಲಕ್ಷ್ಮಣ ನಾಯಕ, ನಾರಾಯಣ ಸ್ವಾಮಿ, ಮುತ್ತ, ಪಿ ಚೈತ್ರ, ಡಿ ಸೌಂದರ್ಯ, ಶೋಭಾ ಮತ್ತು ಮಮತಾ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆಂದು ಚುನಾವಣಾ ಅಧಿಕಾರಿ ಆಶಾ ಅವರು ತಿಳಿಸಿದ್ದಾರೆ.

ಸುದ್ದಿ ಸಿಂಚನ

ನಾಳೆ ಮಹಾದೇವ ಕೋಟ ದೇವಸ್ಥಾನದ ಉತ್ಸವ

ನಾಪೋಕ್ಲು: ಇಲ್ಲಿಗೆ ಸಮೀಪದ ಈಸ್ಟ್ ಕೊಳಕೇರಿಯ ಬಿದ್ದಾಟಟಡ ವಾಡೆ ಸಮೀಪದ ಮಹಾದೇವ ಕೋಟ ದೇವಸ್ಥಾನದ ವಾರ್ಷಿಕ ಉತ್ಸವ ಮೇ 10ರಂದು ಜರುಗಲಿದೆ. ಬೆಳಿಗ್ಗೆ 7:30ಕ್ಕೆ ಗಣಪತಿ ಹೋಮ, 10ಕ್ಕೆ ರುದ್ರಾಭಿಷೇಕ,11ಕ್ಕೆ ಮಹಾಪೂಜೆ, ಅನ್ನದಾನ ನಡೆಯಲಿದೆ ಎಂದು. ದೇವಾಲಯದ ಅಧ್ಯಕ್ಷರು ಹಾಗೂ ಆಡಳಿತ ಮಂಡಳಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ.

12ರಂದು ಉದ್ಯೋಗ ಮೇಳ

ಮಡಿಕೇರಿ: ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ಮೇ 12 ರಂದು ಬೆಳಗ್ಗೆ 11ರಿಂದ ಮಧ್ಯಾಹ್ನ 1 ಗಂಟೆವರೆಗೆ ಮಿನಿ 'ಉದ್ಯೋಗ ಮೇಳ' ನಡೆಯಲಿದೆ. ಮೇಳದಲ್ಲಿ ಪಿರಾಮಲ್ ಫೈನಾನ್ಸ್ ಲಿಮಿಟೆಡ್ ಮೈಸೂರು, ಕಲ್ಯಾಣಿ ಮೋಟರ್ಸ್ ಶೋ ರೂಮ್, ಮಡಿಕೇರಿ, ಇನ್‌ಸ್ಟಂಟ್ ಐಟಿ ಟೆಕ್ನಾಲಜಿ ಮೈಸೂರು, ಹುಂಡಾಯಿ ಕಾರ್‌ಶೋ ರೂಮ್ ಮಡಿಕೇರಿ, ಇವೊಲೋಬ್ಯಾಕ್ ರೆಸಾರ್ಟ್ ಮಡಿಕೇರಿ, ಮುತ್ತೂಟ್ ಮನಿ ಫೈನಾನ್ಸ್ ಮೈಸೂರು ಇವರು ತಮ್ಮ ಸಂಸ್ಥೆಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲಿದ್ದಾರೆ. ಮೇಳದಲ್ಲಿ ಖಾಸಗಿ ಕಂಪನಿಗಳು ಭಾಗವಹಿಸಿ ಖಾಲಿ ಇರುವ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲಿವೆ. ಈ ಉದ್ಯೋಗ ಮೇಳದಲ್ಲಿ ಎಸ್‌ಎಸ್‌ಎಲ್‌ಸಿ, ಪಿಯುಸಿ., ಐಟಿಐ, ಡಿಪ್ಲೋಮ, ಪದವಿ ಹಾಗೂ ಸ್ನಾತಕೋತರ ಪದವಿ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳು ಭಾಗವಹಿಸಿ ಉದ್ಯೋಗದ ನೆರವು ಪಡೆಯಬಹುದಾಗಿದೆ. ಅಭ್ಯರ್ಥಿಗಳು ವಿದ್ಯಾರ್ಹತೆಯ ಮೂಲ ದಾಖಲಾತಿಗಳು, ಅನುಭವ ಪ್ರಮಾಣ ಪತ್ರ (ಅನ್ವಯಿಸುವವರಿಗೆ ಮಾತ್ರ) ಹಾಗೂ ಸ್ವ-ವಿವರಗಳ ಪ್ರತಿಗಳೊಂದಿಗೆ ಉದ್ಯೋಗ ಮೇಳಕ್ಕೆ ಹಾಜರಾಗುವಂತೆ ಜಿಲ್ಲಾ ಉದ್ಯೋಗಾಧಿಕಾರಿ ಸಿ.ಬಿ. ಮಂಜುನಾಥ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗೆ ಜಾಬ್ ಕೋಆರ್ಡಿನೇಟರ್8296020826 ಅವರನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಉದ್ಯೋಗಾಧಿಕಾರಿ ತಿಳಿಸಿದ್ದಾರೆ.

ನಿಧನ ವಾರ್ತೆ

ಮುತ್ತಮ್ಮ ಬಿ.ವಿ.



ನಾಪೋಕ್ಲು: ಇಲ್ಲಿಗೆ ಸಮೀಪದ ಪಾಲೂರು ಗ್ರಾಮದ ನಿವಾಸಿ ದಿವಂಗತ ವೆಂಕಪ್ಪ ಪೂಜಾರಿ ಅವರ ಪತ್ನಿ ಮುತ್ತಮ್ಮ ಬಿ.ವಿ. (80) ಗುರುವಾರ ನಿಧನರಾದರು. ಮೃತರ ಅಂತ್ಯಕ್ರಿಯೆ ಶುಕ್ರವಾರ ಸ್ವಗ್ರಾಮದಲ್ಲಿ ನಡೆಯಿತು. ಅವರ ಒಬ್ಬ ಪುತ್ರ ಹಾಗೂ ಐವರು ಪುತ್ರಿಯರನ್ನು ಅಗಲಿದ್ದಾರೆ.

ಕನ್ನಡಪ್ರಭ
ಆತ್ಮೀಯ ಓದುಗರೇ, ನಮ್ಮ ಪತ್ರಿಕೆ ನಿಮಗೆ ತಲುಪುತ್ತಿಲ್ಲವೇ, ನೀವು ಚಂದಾದಾರರಾಗಲು / ಪತ್ರಿಕೆ ಸರಬರಾಜಿನಲ್ಲಿ ಸಮಸ್ಯೆ ಇದ್ದಲ್ಲಿ ಸಂಪರ್ಕಿಸಿ
ಅನಿಲ್ ಕುಮಾರ್ ಟಿ
ಮೊ.: 8722332268
ಶ್ರೀಧರ್
ಮೊ.: 9980335540

ಶ್ರೀ ಲಕ್ಷ್ಮಿ ಚನ್ನಿಗರಾಯ, ಜೋಡಿ ಹನುಮಂತ ದೇವಸ್ಥಾನ ಪುನರ್‌ಪ್ರತಿಷ್ಠಾಪನಾ ಕಾರ್ಯಕ್ರಮ

ಕಲಶ ಪ್ರತಿಷ್ಠಾಪನೆ, ಆಂಜನೇಯ ಹೋಮ, ವಿಶೇಷ ಪೂಜೆ



ಶ್ರೀ ಲಕ್ಷ್ಮಿ ಚನ್ನಿಗರಾಯ, ಜೋಡಿ ಹನುಮಂತ ದೇವಸ್ಥಾನದ ಪುನರ್‌ಪ್ರತಿಷ್ಠಾಪನಾ ಕಾರ್ಯಕ್ರಮದಲ್ಲಿ ಪಾಲ್ಗೊಂಡ ಮಹಿಳೆಯರು.

• **ಕನ್ನಡಪ್ರಭವಾರ್ತೆ** ಸೋಮವಾರಪೇಟೆ
ತಾಲೂಕಿನ ಹೆಗ್ಗುಳ ಗ್ರಾಮದಲ್ಲಿನ ಶ್ರೀ ಲಕ್ಷ್ಮಿ ಚನ್ನಿಗರಾಯ ಮತ್ತು ಜೋಡಿ ಹನುಮಂತ ದೇವಸ್ಥಾನದ ಜೀರ್ಣೋದ್ಧಾರ ಮತ್ತು ಪುನರ್‌ಪ್ರತಿಷ್ಠಾಪನಾ ಕಾರ್ಯಕ್ರಮ ಮಂಗಳವಾರ, ಬುಧವಾರ ನಡೆಯಿತು.

5ರಂದು ರಾತ್ರಿ 7ರಿಂದ ವಾಸ್ತು ಹೋಮ ಹಾಗೂ ವಿಶೇಷ ಪೂಜೆಗಳು ನಡೆಯಿತು. 6ರಂದು ಬೆಳಿಗ್ಗೆ 7ಕ್ಕೆ ಗಂಗಾಪೂಜೆ ಮತ್ತು ಕಲಶ ಪ್ರತಿಷ್ಠಾಪನೆ ಮತ್ತು ಆಂಜನೇಯ ಹೋಮ, ವಿಶೇಷ ಪೂಜೆಗಳು ನಡೆಯಿತು. ಮಧ್ಯಾಹ್ನ ಅನ್ನಸಂತರ್ಪಣೆ ನಡೆಯಿತು.

ಪೂಜಾ ಕಾರ್ಯಗಳು ಅರ್ಚಕ ಉಚ್ಚಂಗಿ ಶೇಷಾಚಲ ಅವರ ನೇತೃತ್ವದಲ್ಲಿ ನಡೆಯಿತು. ದೇವಾಲಯ ಸಮಿತಿ ಅಧ್ಯಕ್ಷ ವಸಂತ, ಉಪಾಧ್ಯಕ್ಷ ಎಚ್.ಕೆ. ಪುಟ್ಟಸ್ವಾಮಿ, ಪ್ರಧಾನ ಕಾರ್ಯದರ್ಶಿಎಚ್.ಎಂ.ನಿಶ್ಚಿತ್‌ಹಾಗೂಪದಾಧಿಕಾರಿಗಳಾದ ಎಚ್.ಎಸ್. ಚೇತನ್‌ಕುಮಾರ್, ಎಚ್.ಎಂ. ಸಂಜು ಇದ್ದರು.

ಮಕ್ಕಳಲ್ಲಿ ಸೇವಾ ಮನೋಭಾವ ಬೆಳೆಯಬೇಕು: ಪ್ರತಿಮಾ

ಹಾಕತ್ತೂರು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಎನ್ನೆಸ್ಸೆಸ್ ವಾರ್ಷಿಕ ವಿಶೇಷ ಶಿಬಿರ

• **ಕನ್ನಡಪ್ರಭ ವಾರ್ತೆ** ನಾಪೋಕ್ಲು
ಕರ್ನಾಟಕ ಸರ್ಕಾರಿ ಕಾಲೇಜು ಶಿಕ್ಷಣ ಇಲಾಖೆ, ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ಮಡಿಕೇರಿಯ ರಾಷ್ಟ್ರೀಯ ಸೇವಾ ಯೋಜನಾ ಘಟಕ ವತಿಯಿಂದ ವಾರ್ಷಿಕ ವಿಶೇಷ ಶಿಬಿರ 7 ದಿನಗಳ ಕಾಲ ಹಾಕತ್ತೂರು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆಯಿತು.

ಸಮಾರೋಪ ಸಮಾರಂಭದ ಸಭಾ ಕಾರ್ಯಕ್ರಮದಲ್ಲಿ ಮುಖ್ಯ ಭಾಷಣಕಾರರಾಗಿ ವಿರಾಜಪೇಟೆ ಸೈಂಟ್ ಆನ್ಸ್ ಪ್ರಥಮ ದರ್ಜೆ ಕಾಲೇಜಿನ ಉಪನ್ಯಾಸಕರಾದ ಪ್ರತಿಮಾ ಹರೀಶ ರೈ ಮಾತನಾಡಿ,ಮಕ್ಕಳಲ್ಲಿಸೇವಾಮನೋಭಾವನೆ ಬೆಳೆಯಬೇಕು. ಸಾಲು ಮರದ ತಿಮ್ಮಕ್ಕ ಮತ್ತು ಹರೇಕಳ ಹಾಜಬ್ಬ ಅವರನ್ನು ಉಲ್ಲೇಖಿಸಿ ನಾವು ಸಮಾಜಕ್ಕೆ ಏನಾದರೂ ಒಳ್ಳೆಯ ಕೆಲಸ ಮಾಡಬೇಕು ಎಂದು ಹೇಳಿದರು.

ಹಾಕತ್ತೂರು ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಮುಖ್ಯೋಪಾಧ್ಯಾಯ ಕುಮಾರಸ್ವಾಮಿ ಟಿ.ಬಿ.ಮಾತನಾಡಿ,ಮಕ್ಕಳಲ್ಲಿವಿಚಾರವಂತಿಕೆ, ನೀತಿವಂತಿಕೆ ಇರುವ ವಿದ್ಯೆಯು ಗಳಿಕೆಯಾಗಬೇಕು. ತಮ್ಮ ನಿಸ್ವಾರ್ಥ ಸೇವೆಯು ಸಮಾಜಕ್ಕೆ ಸಲ್ಲಿಕೆಯಾಗಬೇಕು ಎಂದರು.

ಮಡಿಕೇರಿ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ನಿರ್ಮಲಾ ಎಚ್.ಪಿ. ಅಧ್ಯಕ್ಷತೆ ವಹಿಸಿದ್ದರು. ಎನ್ನೆಸ್ಸೆಸ್ ಶಿಬಿರ ವಿದ್ಯಾರ್ಥಿಗಳಿಗೆ ಶಿಸ್ತು, ಸಂಯಮ, ಸರಳತೆ, ನಾಯಕತ್ವ ಗುಣಗಳನ್ನು ಬೆಳೆಸುವಲ್ಲಿ ಸಹಕಾರಿ ಎಂದು ಹೇಳಿದರು.

ಶಿಬಿರಾಧಿಕಾರಿ ಉಪನ್ಯಾಸಕ ಡಾಕ್ಟರ್ ವೇಣುಗೋಪಾಲ ಅವರು ಏಳು ದಿನಗಳ ಶಿಬಿರದ ವರದಿ ವಾಚಿಸಿದರು. ಸಹ ಯೋಜನಾಧಿಕಾರಿ ರಾಕಿ ಪೊನ್ನಣ್ಣ, ಶಿಬಿರದ ನಾಯಕಿ ಆಶಿತಾ ಉಪಸ್ಥಿತರಿದ್ದರು.



ಶಿಬಿರಾರ್ಥಿಗಳು ಶಾಲಾ ಆವರಣ, ರಸ್ತೆ ಬದಿ ಸ್ವಚ್ಛತಾ ಕಾರ್ಯ ನಡೆಸಿದರು.

ಮೂಲ ಸೌಕರ್ಯ ಅಭಿವೃದ್ಧಿಗೆ 50 ಕೋಟಿ ಅನುದಾನ: ಡಾ.ಮಂತರ್ ಗೌಡ

ಕುಶಾಲನಗರ ಪುರಸಭೆ ವ್ಯಾಪ್ತಿಯ ಮೂಲ ಸೌಕರ್ಯ ಅಭಿವೃದ್ಧಿ ಕಾಮಗಾರಿಗಳಿಗೆ ಮಡಿಕೇರಿ ಶಾಸಕರಿಂದ ಚಾಲನೆ

• **ಕನ್ನಡಪ್ರಭ ವಾರ್ತೆ** ಕುಶಾಲನಗರ
2025 - 26 ನೇ ಸಾಲಿನ ಮುಖ್ಯಮಂತ್ರಿ ಮೂಲ ಸೌಕರ್ಯ ಅಭಿವೃದ್ಧಿ ಯೋಜನೆ ಅಡಿಯಲ್ಲಿ ಕುಶಾಲನಗರ ಪುರಸಭೆ ವ್ಯಾಪ್ತಿಯ ವಿವಿಧೆಡೆ ಅಭಿವೃದ್ಧಿ ಕಾಮಗಾರಿಗಳಿಗೆ ಮಡಿಕೇರಿ ಶಾಸಕ ಡಾ. ಮಂತರ್ ಗೌಡ ಚಾಲನೆ ನೀಡಿದರು.

ಕುಶಾಲನಗರ ಪುರಸಭೆ ವ್ಯಾಪ್ತಿಯ ಸೋಮೇಶ್ವರ ದೇವಾಲಯದಿಂದ ಗುಂಡುರಾವ್ ಬಡಾವಣೆಯ ಸಂಪರ್ಕ ರಸ್ತೆ ತನಕ ಒಂದು ಕೋಟಿ ರು. ವೆಚ್ಚದ ಅಭಿವೃದ್ಧಿ ಕಾಮಗಾರಿ ಸೇರಿದಂತೆ ಒಟ್ಟು 5.5 ಕೋಟಿ ರು. ವೆಚ್ಚದ 11 ಕಾಮಗಾರಿಗಳಿಗೆ ಶಂಕುಸ್ಥಾಪನೆ ಸ್ಥಾಪನೆ ನೆರವೇರಿಸಿದರು. ಈ ಸಂದರ್ಭ ಮಾತನಾಡಿದ ಡಾ. ಮಂತರ್‌ಗೌಡ, ಮುಖ್ಯಮಂತ್ರಿ ಮೂಲ ಸೌಕರ್ಯ ಅಭಿವೃದ್ಧಿ ಯೋಜನೆ ಅಡಿ ಜಿಲ್ಲೆಗೆ 50 ಕೋಟಿ ಅನುದಾನ ಲಭಿಸಿದ್ದು ಅದರಲ್ಲಿ ಕುಶಾಲನಗರ ಪಟ್ಟಣದ ಅಭಿವೃದ್ಧಿ ಕಾಮಗಾರಿಗೆ 5.5 ಕೋಟಿ ರು. ಮೀಸಲಿರಿಸಲಾಗಿದೆ.



ಅಭಿವೃದ್ಧಿ ಕಾಮಗಾರಿಗಳಿಗೆ ಮಡಿಕೇರಿ ಶಾಸಕ ಡಾ ಮಂತರ್ ಗೌಡ ಚಾಲನೆ ನೀಡಿದರು.

> ಉತ್ತಮ ಗುಣಮಟ್ಟದ ಕಾಮಗಾರಿ ನಡೆಯುವಂತೆ ನೋಡಿಕೊಳ್ಳುವುದು ಪ್ರತಿ ಯೊಬ್ಬ ನಾಗರಿಕರ ಜವಾಬ್ದಾರಿಯಾಗಿದೆ.
> ■ ಡಾ. ಮಂತರ್ ಮಡಿಕೇರಿ ಶಾಸಕರು

ಪಟ್ಟಣದ ಸಂಪರ್ಕ ರಸ್ತೆಗಳು ಮತ್ತು ಸುತ್ತಮುತ್ತ ವ್ಯಾಪ್ತಿಯ ಬಡಾವಣೆಗಳ ರಸ್ತೆ ಅಭಿವೃದ್ಧಿ ಕಾಮಗಾರಿ ನಡೆಯಲಿದೆ ಎಂದರು.

ಕುಶಾಲನಗರ ಗೊಂದಿ ಬಸವನಹಳ್ಳಿ ದೇವಸ್ಥಾನದ ಕಮಾನು ಉದ್ಘಾಟನೆ, ರಸ್ತೆ ಕಾಮಗಾರಿ ಪುರಸಭೆ ವ್ಯಾಪ್ತಿಯ ಸಾಯಿ ಆಸ್ಪತ್ರೆಯ ಮುಂಭಾಗದ ರಸ್ತೆ ಅಭಿವೃದ್ಧಿ, ಕರಿಯಪ್ಪ ಬಡಾವಣೆಯ ರಸ್ತೆ ಕಾಮಗಾರಿ, ಹಿಂದು ರುದ್ರಭೂಮಿಗೆ ತೆರಳುವ ರಸ್ತೆ, ಅಭಿವೃದ್ಧಿ, ಹೌಸಿಂಗ್ ಬೋರ್ಡ್ ತೆರಳುವ ರಸ್ತೆ ಕಾಮಗಾರಿ, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಒತ್ತಿನಲ್ಲಿರುವ ಚರ್ಚ್ ತೆರಳುವ ಮಾರ್ಗ, ಉರ್ದು ಶಾಲೆ ಬಳಿ ರಸ್ತೆಯ ಅಭಿವೃದ್ಧಿ ಸೇರಿದಂತೆ ಸುಮಾರು 11 ಕಡೆ ಶಾಸಕರು ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿದರು.

ಈ ಸಂದರ್ಭ ಕುಶಾಲನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷರಾದ ಪ್ರಮೋದ್ ಮುತ್ತಪ್ಪ, ಕುಶಾಲನಗರ ಪುರಸಭೆ ಮುಖ್ಯ ಅಧಿಕಾರಿ ಗಿರೀಶ್, ಇಂಜಿನಿಯರ್ ಅರ್ಬಸ್ ಅಹಮದ್, ನಗರ ಕಾಂಗ್ರೆಸ್ ಅಧ್ಯಕ್ಷ ಜೋಸೆಫ್ ವಿಕ್ಟರ್ ಸೋನ್ಸ್, ಪಕ್ಷದ ಪ್ರಮುಖರಾದ ಮಂಜುನಾಥ್ ಗುಂಡೂರಾವ್ ಜಿ.ಆರ್. , ಪುಷ್ಪಲತಾ, ಪ್ರಕಾಶ್, ಸಜಿ, ಜಗದೀಶ್, ವಿ.ಎಸ್. ಆನಂದ್ ಕುಮಾರ್ ಗೋವಿಂದಪ್ಪ, ಹರೀಶ್, ದಿನೇಶ್ ಎಂ.ಕೆ., ಅಶೋಕ್, ನಂಜುಂಡಸ್ವಾಮಿ, ಜಯಲಕ್ಷ್ಮಮ್ಮ, ವಿ.ಪಿ. ಸುಕೇಶ್ ಇದ್ದರು.

ಹೃದಯಾಘಾತ: ಯುವಕ ಸಾವು

ಬೆಳ್ತಂಗಡಿ: ಮುಂಡಾಜೆ ಗ್ರಾಮದ ಸೋಮಂತಡ್ಕದ ಅಗರಿ ರಸ್ತೆ ನಿವಾಸಿ ಪುನೀತ್ ಕುಮಾರ್‌ಎಸ್. (35) ಹೃದಯಾಘಾತದಿಂದ ಮೇ 8ರಂದು ನಿಧನರಾದರು. ಬೆಳಗಿನ ಜಾವ ಅವರಿಗೆ ಮನೆಯಲ್ಲಿ ಎದೆ ನೋವು ಕಾಣಿಸಿಕೊಂಡಿದ್ದು, ಬಳಿಕ ಬೆಳ್ತಂಗಡಿ ಸರಕಾರಿ ಆಸ್ಪತ್ರೆಗೆ ಕರೆದೊಯ್ಯಲಾಯಿತು. ಅಲ್ಲಿ ಅವರು ಚಿಕಿತ್ಸೆಗೆ ಸ್ಪಂದಿಸದೆ ನಿಧನರಾದರು. ಕಂಪನಿಯಲ್ಲಿ ಉದ್ಯೋಗಿಯಾಗಿದ್ದ ಅವರು ಪ್ರಸ್ತುತ ಮನೆಯಿಂದಲೇ ಕಾರ್ಯನಿರ್ವಹಿಸುತ್ತಿದ್ದರು.

ಮನೋಲ್ಲಾಸ | ವಾಂಡರ್ಸ್ ಕ್ಲಬ್-ಮಕ್ಕಳ ಬೇಸಿಗೆ ಕ್ರೀಡಾ ತರಬೇತಿ ಉಚಿತ ಶಿಬಿರ ಸಮಾರೋಪ

ಮಕ್ಕಳು ದೇಶಭಕ್ತರಾಗಿ ಬಾಳಿ: ಕ್ಯಾ. ಶಿವಪ್ರಕಾಶ್

• **ಕನ್ನಡಪ್ರಭ ವಾರ್ತೆ** ಮಡಿಕೇರಿ
ಮಕ್ಕಳು ಬಾಲ್ಯಾವಸ್ಥೆಯಿಂದಲೇ ಶಿಸ್ತು ಮೈಗೂಡಿಸಿಕೊಳ್ಳುವುದರೊಂದಿಗೆ ದೇಶ ಭಕ್ತರಾಗಿ ಬಾಳಬೇಕು ಎಂದು ಮಾಜಿ ಕ್ಯಾಪ್ಟನ್, ಮ್ಯಾರಥಾನ್ ಓಟಗಾರ ಕಿಮ್ಮುಡಿರ ಶಿವಪ್ರಕಾಶ್ ಕಿವಿ ಮಾತು ಹೇಳಿದರು.

ಮಡಿಕೇರಿಯ ವಾಂಡರ್ಸ್ ಸ್ಪೋರ್ಟ್ಸ್ ಕ್ಲಬ್ ವತಿಯಿಂದ ದಿ. ಶಂಕರ್‌ಸ್ವಾಮಿ ಸ್ಮರಣಾರ್ಥ ಜಿಲ್ಲಾ ಕ್ರೀಡಾಂಗಣದಲ್ಲಿ ಏರ್ಪಡಿಸಲಾಗಿದ್ದ ಮಕ್ಕಳ ಉಚಿತ ಬೇಸಿಗೆ ಕ್ರೀಡಾ ತರಬೇತಿ ಶಿಬಿರದ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಅವರು ಮಾತನಾಡಿದರು.

ಶಿಬಿರದಲ್ಲಿ ಕಲಿತದ್ದನ್ನು ಮಕ್ಕಳು ಮೈಗೂಡಿಸಿಕೊಳ್ಳಬೇಕು. ಆಗ ಮಾತ್ರ ಶಿಬಿರ ಆಯೋಜನೆ ಮಾಡಿದವರಿಗೆ ಹಾಗೂ ತರಬೇತು ನೀಡಿದವರ ಶ್ರಮಕ್ಕೆ ಬೆಲೆ ಸಿಗಲಿದೆ. ಶಿಸ್ತನ್ನು ರೂಢಿಸಿಕೊಳ್ಳುವುದರೊಂದಿಗೆ ಮಕ್ಕಳು ಈಗಿನಿಂದಲೇ ದೇಶ ಭಕ್ತರಾಗಿ ದೇಶಕ್ಕಾಗಿ ಬದುಕಬೇಕು ಎಂದು ಹೇಳಿದರು.



ಶಿಬಿರದ ಸಮಾರೋಪ ಸಮಾರಂಭದಲ್ಲಿ ಪಾಲ್ಗೊಂಡಿದ್ದವರು.

ಮ್ಯಾರಥಾನ್ ಓಟಗಾರ, ಕ. ಕಾವೇರಪ್ಪ, ಜಾನಪದ ಪರಿಷತ್ ಸದಸ್ಯ ಬಿ.ಜಿ. ಅನಂತಶಯನ ಮಾತನಾಡಿದರು.

ಅಧ್ಯಕ್ಷತೆ ವಹಿಸಿದ್ದ ವಾಂಡರ್ಸ್ ಅಧ್ಯಕ್ಷ ಕೋಟೇರ ಮುದ್ದಯ್ಯ ಮಾತನಾಡಿ, ಶಿಬಿರದಲ್ಲಿ ಕಲಿತದ್ದನ್ನು ಮನನ ಮಾಡಿ ಕೊಳ್ಳುವುದರೊಂದಿಗೆ ಪ್ರತಿನಿತ್ಯ ಅಭ್ಯಾಸ ಮುಂದುವರಿಸಿ ಸಾಧನೆ ಮಾಡುವಂತೆ ಕರೆ ನೀಡಿದರು.

ವಾಂಡರ್ಸ್ ಹಿರಿಯ ಆಟಗಾರ ಕೋಟೇರ ನಾಣಯ್ಯ, ಶಿಬಿರದ ಸಂಚಾಲಕ ಬಾಬು ಸೊಮಯ್ಯ ಇದ್ದರು. ತರಬೇತುದಾರರಾದ ಬೊಪ್ಪಂಡ ಶಾಂ ಪೂಣಚ್ಚ, ಕುಡೆಕಲ್ ಸಂತೋಷ್, ನಾಟೋಳಂಡ ಸೊಮಯ್ಯ, ಕರವಂಡ ಕಿರಣ್, ಲೋಕೇಶ್ ನಾಯ್ಡು, ಬಿ.ಎಸ್. ತಿಲಕ್, ಕಾವ್ಯ ಸೋಮಯ್ಯ, ಜನ್ಯರನ್ನು ಗೌರವಿಸಲಾಯಿತು. ಶಿಬಿರದಲ್ಲಿ ಕಲಿತ ಮಕ್ಕಳು ಯೋಗ ಪ್ರದರ್ಶನ ಮಾಡಿದರು. ಮಕ್ಕಳು ಹಾಗೂ ಪೋಷಕರು ಶಿಬಿರದ ಬಗ್ಗೆ ಅನಿಸಿಕೆ ವ್ಯಕ್ತಪಡಿಸಿದರು. ಯೋಗ ಗುರು ಕೆ.ಕೆ. ಮಹೇಶ್ ಕುಮಾರ್, ನಿವೃತ್ತ ದೈಹಿಕ ಶಿಕ್ಷಣ ನಿರ್ದೇಶಕ ವೆಂಕಟೇಶ್ ನಿರ್ವಹಿಸಿದರು.

> ಮಕ್ಕಳಲ್ಲಿ ಶಿಸ್ತು ಅತಿ ಮುಖ್ಯ, ಶಿಬಿರದಲ್ಲಿ ಎಲ್ಲರೂ ಅದನ್ನೇ ಕಲಿಸುವುದು. ಯಾವುದೇ ಕೆಲಸದಲ್ಲಾದರೂ ಶಿಸ್ತು ಮುಖ್ಯ. ಈ ಶಿಬಿರದಲ್ಲಿ ಪ್ರತಿ ವರ್ಷ 100ರಿಂದ 125ರಷ್ಟು ಮಕ್ಕಳು ಭಾಗವ ಹಿಸುತ್ತಿರುವುದು ಹೆಮ್ಮೆಯ ವಿಷಯ.
> ■ ಕಿರುದಂಡ ಗಣೇಶ್ ಅರಣ್ಯ ಇಲಾಖಾ ನಿವೃತ್ತ ಅಧಿಕಾರಿ

ಕರ್ಣಂಗೇರಿ ಕ್ಷೇತ್ರ ವಾರ್ಷಿಕೋತ್ಸವ



ಶ್ರೀ ರಾಜ ರಾಜೇಶ್ವರಿ ದೇವರ ರಥೋತ್ಸವ ಭಕ್ತಿ, ವೈಭವದಿಂದ ನಡೆಯಿತು.

ಮಡಿಕೇರಿ: ಮಡಿಕೇರಿ ನಗರದ ಹೊರವಲಯದ ಕರ್ಣಂಗೇರಿ ಕ್ಷೇತ್ರದ ಶ್ರೀ ರಾಜ ರಾಜೇಶ್ವರಿ ದೇವಾಲಯದ ವಾರ್ಷಿಕೋತ್ಸವ ಹಾಗೂ ರಥೋತ್ಸವ ಶ್ರದ್ಧಾ ಭಕ್ತಿಯಿಂದ ಜರುಗಿತು.

ಬೆಳಗ್ಗೆ ಧ್ವಜಾರೋಹಣ, ಗಣಪತಿ ಹೋಮ, ದೇವಿಗೆ ಅಭಿಷೇಕ, ಹೂವಿನ ಅಲಂಕಾರ ನಂತರ ತೀರ್ಥಸ್ನಾನ, ಕಳಸ ಪೂಜೆ ನಡೆಯಿತು. ದೇವಿಯ ರಥೋತ್ಸವ ದೇವಸ್ಥಾನದ ಆವರಣದ ಸುತ್ತಲೂ ಸಾಗಿತು. ತುಲಾಭಾರ, ತಲೆಮುಡಿ ತೆಗೆಯುವುದು, ತೀರ್ಥಸ್ನಾನ, ಉರುಳು ಸೇವೆ, ಭಕ್ತರಿಗೆ ಅನ್ನಸಂತರ್ಪಣೆ ನಡೆಯಿತು. ಸಾವಿರಾರು ಭಕ್ತರು ತಾಯಿಯ ದರ್ಶನಕ್ಕೆ ಸಾಕ್ಷಿಯಾದರು.

ಸಂಜೆ ಸಾಂಸ್ಕೃತಿಕ ಕಾರ್ಯಕ್ರಮಗಳು ಹಾಗೂ ದೀಪಾಲಂಕಾರ ನಡೆಯಿತು. ಪ್ರತಿ ವರ್ಷದಂತೆ ಈ ವರ್ಷವೂ ವಿದ್ಯಾರ್ಥಿಗಳಿಗೆ ಪುಸ್ತಕಗಳನ್ನು ವಿತರಿಸಲಾಯಿತು. ರಾತ್ರಿ ಅನ್ನದಾನ ಸೇವೆ, ದೇವಿಯ ದರ್ಶನ ಹಾಗೂ ಪೂಜಾ ಕಾರ್ಯಕ್ರಮ ಶ್ರದ್ಧಾಭಕ್ತಿಯೊಂದಿಗೆ ನಡೆಯುವುದರೊಂದಿಗೆ ವಾರ್ಷಿಕೋತ್ಸವ ಸಂಪನ್ನಗೊಂಡಿತು.

ಸುದ್ದಿ ಸಿಂಚನ

17ರಿಂದ ಪುನರೂರು ಪ್ರತಿಷ್ಠಾನ ಬೇಸಿಗೆ ಶಿಬಿರ

ಮೂಲ್ಕಿ: ಪುನರೂರು ಪ್ರತಿಷ್ಠಾನ ಆಶ್ರಯದಲ್ಲಿ ಜನ ವಿಕಾಸ ಸಮಿತಿ ಮೂಲ್ಕಿ ಸಹಕಾರದಲ್ಲಿ ಬಾಲ ವಿಕಾಸ ಶಿಬಿರ-2026 (ಮಕ್ಕಳ ಬೌದ್ಧಿಕ ಬೆಳವಣಿಗೆಗಾಗಿ ಉಚಿತ ಬೇಸಿಗೆ ಶಿಬಿರ)ವು ಪುನರೂರು ಶ್ರೀ ವಿಶ್ವನಾಥ ದೇವಸ್ಥಾನದ ಸಭಾಂಗಣದಲ್ಲಿ ಮೇ 17ರಿಂದ 24ರವರೆಗೆ ಬೆಳಿಗ್ಗೆ 8 ಗಂಟೆಯಿಂದ ಸಂಜೆ 4ರವರೆಗೆ ಜರುಗಲಿದೆ.

ಶಿಬಿರದಲ್ಲಿ ಯೋಗ ಶಿಕ್ಷಕ ಜಯ ಮುದ್ದು ಶೆಟ್ಟಿ ಅವರಿಂದ ಯೋಗ ತರಬೇತಿ, ರಂಗ ನಟ, ನಿರ್ದೇಶಕ ತಾರನಾಥ್ ಉರ್ವ ಅವರಿಂದ ಅಭಿನಯ ತರಬೇತಿ, ಶಿಮಂತೂರು ಶ್ರೀ ಶಾರದಾ ಸೆಂಟ್ರಲ್ ಸ್ಕೂಲ್ ನ ಪ್ರಾಂಶುಪಾಲ ಜಿತೇಂದ್ರ ವಿ. ರಾವ್, ಹೆಜಮಾಡಿ ಅವರಿಂದ ಶ್ಲೋಕ ಕಂಠ ಪಾಠ, ಹಳೆಯಂಗಡಿಯ ಖ್ಯಾತ ಗಾಯಕ, ಭಜನೆ ಶಿಕ್ಷಕ ಸುರೇಶ್ ಆಚಾರ್ಯರಿಂದ ಭಜನೆ, ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಶಿಕ್ಷಕ ವೆಂಕಿ ಫಲಿಮಾರ್ ಅವರಿಂದ ಆವೆ ಮಣ್ಣಿನ ಕಲಾಕೃತಿ ರಚನೆ ಮತ್ತು ಕರಕುಶಲ ತರಬೇತಿ ನಡೆಯಲಿದೆ.

ಶಿಬಿರಾರ್ಥಿಗಳು ಅರ್ಜಿಯೊಂದಿಗೆ ಆಧಾರ್ ಪ್ರತಿಯನ್ನು1 ಭಾವಚಿತ್ರದೊಂದಿಗೆ ನೀಡಬೇಕು. ಮೊದಲು ಬಂದ 50 ಅರ್ಜಿಗಳನ್ನು ಮಾತ್ರ ಸ್ವೀಕರಿಸಲಾಗುವುದು. ಮೂಲ್ಕಿ ತಾಲೂಕು ಮಟ್ಟದ 8ರಿಂದ 12 ವರ್ಷ ವಯೋಮಿತಿಯ ಮಕ್ಕಳಿಗೆ ಮಾತ್ರ ಅವಕಾಶ. ಅರ್ಜಿ ಸ್ವೀಕರಿಸುವ ಕೊನೆಯ ದಿನಾಂಕ 10-05-2026.

ಹೆಚ್ಚಿನ ಮಾಹಿತಿಗಾಗಿ 9341223111 ದೂರವಾಣಿ ಸಂಖ್ಯೆಯನ್ನು ವಾಟ್ಸ್ ಆ್ಯಪ್ ಮುಖಾಂತರ ಸಂಪರ್ಕಿಸುವಂತೆ ಪುನರೂರು ಪ್ರತಿಷ್ಠಾನದ ಅಧ್ಯಕ್ಷ ದೇವಪ್ರಸಾದ್ ಪುನರೂರು ಮತ್ತು ಜನ ವಿಕಾಸ ಸಮಿತಿ ಮೂಲ್ಕಿ ಅಧ್ಯಕ್ಷ ಸುರೇಶ್ ರಾವ್ ಪಿ.ಎಸ್. ತಿಳಿಸಿದ್ದಾರೆ.

ಆದಿಶಕ್ತಿ ಅಂತರಘಟ್ಟೆ ಅಮ್ಮ ದೇವಾಲಯದ ವಾರ್ಷಿಕೋತ್ಸವ

ಕುಶಾಲನಗರ: ಕುಶಾಲನಗರ ಬೈಚನಹಳ್ಳಿಯ ಶ್ರೀ ಆದಿಶಕ್ತಿ ಅಂತರಘಟ್ಟೆ ಅಮ್ಮ ದೇವಾಲಯದ 11ನೇ ವರ್ಷದ ವಾರ್ಷಿಕೋತ್ಸವ ಕಾರ್ಯಕ್ರಮ ಭಕ್ತಿ ಭಾವದಿಂದ ನಡೆಯಿತು.

ಬೆಳಗ್ಗೆ ಗಣಪತಿ ಹೋಮ, ದುರ್ಗಾ ಹೋಮ, ನವ ಶಕ್ತಿ ಅಭಿಷೇಕ, ಪಂಚಾಮೃತ ಅಭಿಷೇಕ ನಡೆದು ಮಹಾಮಂಗಳಾರತಿ ತೀರ್ಥಪ್ರಸಾದ ನಂತರ ಅನ್ನಸಂತರ್ಪಣೆ ನಡೆಯಿತು. ಕೃಷ್ಣಮೂರ್ತಿ ಭಟ್ ನೇತೃತ್ವದ ಅರ್ಚಕರ ತಂಡದಿಂದ ಪೂಜಾ ವಿಧಿ ವಿಧಾನಗಳು ಜರುಗಿದವು.

ಕುಶಾಲನಗರ ದೇವಾಲಯಗಳ ಒಕ್ಕೂಟದ ಪ್ರತಿನಿಧಿಗಳು ಫಲ ತಾಂಬೂಲದೊಂದಿಗೆ ಆಗಮಿಸಿ ಸಾಮೂಹಿಕ ಪೂಜೆ ಸಲ್ಲಿಸಿದರು.

ಮಡಿಕೇರಿ ಶಾಸಕ ಡಾ ಮಂತರ್‌ಗೌಡ ದೇವಾಲಯಕ್ಕೆ ಆಗಮಿಸಿ ಪೂಜೆ ಸಲ್ಲಿಸಿ ಶುಭ ಕೋರಿದರು. ಗ್ರಾಮ ಸೇರಿದಂತೆ ಸುತ್ತಮುತ್ತಲ ಭಕ್ತಾದಿಗಳು ಪೂಜಾ ಕಾರ್ಯಕ್ರಮದಲ್ಲಿ ಪಾಲ್ಗೊಂಡರು.

ದೇವಾಲಯ ಸೇವಾ ಸಮಿತಿ ಅಧ್ಯಕ್ಷರಾದ ವಿ ಗಿರೀಶ್, ಗೌರವಾಧ್ಯಕ್ಷರಾದ ಗೋವಿಂದರಾಜು ಉಪಾಧ್ಯಕ್ಷರಾದ ಬಿ ಎಸ್ ಗಣೇಶ್, ಕಾರ್ಯದರ್ಶಿ ಬಿ ಎಂ ಜಗದೀಶ್, ಖಜಾಂಚಿ ಜಗದೀಶ್ ದೇವಾಲಯ ಅರ್ಚಕರಾದ ಸ್ವಾಮಿ ಇದ್ದರು.

ಮಾಹೆ ಎಂಐಟಿಗೆ ಸಿಎಫ್‌ಎ ಇನ್‌ಸ್ಟಿಟ್ಯೂಟ್ ಮಾನ್ಯತೆ

ಮಣಿಪಾಲದಲ್ಲಿ ನಡೆದ ಕಾರ್ಯಕ್ರಮದಲ್ಲಿ ಪ್ರಮಾಣಪತ್ರ ಹಸ್ತಾಂತರ | ಎಂಐಟಿ ವಿದ್ಯಾರ್ಥಿಗಳಿಗೆ ಜಾಗತಿಕ ಮಟ್ಟದ ಶಿಕ್ಷಣ ಅನುಕೂಲ

• **ಕನ್ನಡಪ್ರಭ ವಾರ್ತೆ** ಮಣಿಪಾಲ

ಮಣಿಪಾಲ್ ಅಕಾಡೆಮಿ ಆಫ್ ಹೈಯರ್ ಎಜುಕೇಶನ್ (ಮಾಹೆ) ವಿವಿಯ ಅಂಗ ಸಂಸ್ಥೆ ಮಣಿಪಾಲ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯು (ಎಂಐಟಿ)ಗೆ ಪ್ರತಿಷ್ಠಿತ ಸಿಎಫ್‌ಎ ಇನ್‌ಸ್ಟಿಟ್ಯೂಟ್ ವಿಶ್ವವಿದ್ಯಾಲಯದಿಂದ ಮಾನ್ಯತೆ ಸಿಕ್ಕಿದ್ದು, ಎಂಐಟಿಯು ಈ ಮಾನ್ಯತೆಪಡೆದಭಾರತದಮೊದಲಮತ್ತುಏಕೈಕಎಂಜಿನಿಯರಿಂಗ್ ಸಂಸ್ಥೆ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ.

ಮೇ 6ರಂದು ಮಣಿಪಾಲದಲ್ಲಿ ನಡೆದ ರ್ಕಾಯಕ್ರಮದಲ್ಲಿ ಸಿಎಫ್‌ಎ ಇನ್‌ಸ್ಟಿಟ್ಯೂಟ್‌ನ ಪ್ರತಿನಿಧಿಗಳಾದ ಸೈಮ್ ಫಕಿಹ್ ಮತ್ತು ಕುಮಾರಿ ಅಂಜನಾ ನಹರ್‌ಅವರು ಮಾಹೆಯ ಕುಲಸಚಿವ ಡಾ. ಪಿ. ಗಿರಿಧರ್‌ಕಿಣಿ ಅವರಿಗೆ ಈ ಮಾನ್ಯತೆ ಪ್ರಮಾಣಪತ್ರ ಅಧಿಕೃತವಾಗಿ ಹಸ್ತಾಂತರಿಸಿದರು.

ಎಂಐಟಿ ನಿರ್ದೇಶಕರಾದ ಕಮಾಂಡರ್(ಡಾ) ಅನಿಲ್ ರಾಣಾ ಮತ್ತು ಡಾ. ಕುಂಚಂ ಶ್ಯಾಮ್ ಪ್ರಸಾದ್, ಎಂಐಟಿ ಸ್ಕೂಲ್ ಆಫ್ ಬೇಸಿಕ್ ಸೈನ್ಸಸ್, ಹ್ಯುಮಾನಿಟೀಸ್ ಅಂಡ್ ಮ್ಯಾನೇಜ್‌ಮೆಂಟ್‌ನ ಸಹ ಡೀನ್ ಡಾ. ಯೋಗೇಶ್ ಪೈ ಪಿ. ಹಾಗೂ ಪ್ರಾಧ್ಯಾಪಕರು ಉಪಸ್ಥಿತರಿದ್ದರು.

ಈ ಮಾನ್ಯತೆಯಿಂದ ಎಂಐಟಿ ವಿದ್ಯಾರ್ಥಿಗಳಿಗೆ ಹಣಕಾಸು ತಂತ್ರಜ್ಞಾನದ ಕ್ಷೇತ್ರದಲ್ಲಿ ಜಾಗತಿಕ ಮಟ್ಟದ ಶಿಕ್ಷಣ ದೊರೆಯಲಿದೆ. ಈ ಮಾನ್ಯತೆಯು ವಿದ್ಯಾರ್ಥಿಗಳಿಗೆ ಉನ್ನತ ಗುಣಮಟ್ಟದ ಅಧ್ಯಯನ ಸಾಮಗ್ರಿಗಳನ್ನು ಒದಗಿಸುವುದಲ್ಲದೆ, ಉದ್ಯಮದ ತಜ್ಞರೊಂದಿಗೆ ಸಂಪರ್ಕ ಸಾಧಿಸಲು ಮತ್ತು ವಿವಿಧ ವಿದ್ಯಾರ್ಥಿವೇತನಗಳನ್ನು ಪಡೆಯಲು ದಾರಿಯಾಗಲಿದೆ.

ಜಾಗತಿಕ ಮಟ್ಟದಲ್ಲಿ ಹಣಕಾಸು ಮತ್ತು ಹೂಡಿಕೆ ಕ್ಷೇತ್ರದಲ್ಲಿ ಅತ್ಯುನ್ನತ ಗುಣಮಟ್ಟವನ್ನು ಕಾಪಾಡಿಕೊಳ್ಳುವ ಸಿಎಫ್‌ಎ ಇನ್‌ಸ್ಟಿಟ್ಯೂಟ್‌ನೊಂದಿಗೆ ಕೈಜೋಡಿಸಿರುವುದು ಎಂಐಟಿಯಲ್ಲಿ ಎಂಜಿನಿಯರಿಂಗ್ ಶಿಕ್ಷಣದ ಜತೆಗೆ ಹಣಕಾಸು ಕ್ಷೇತ್ರದ ಜಾಗತಿಕ ಮೌಲ್ಯಗಳನ್ನು ಅಳವಡಿಸಿಕೊಳ್ಳುವ ನಿಟ್ಟಿನಲ್ಲಿ ಅತ್ಯಂತ ಮಹತ್ವದ್ದಾಗಿದೆ.



ಮಣಿಪಾಲದ ಎಂಐಟಿಗೆ ಸಿಎಫ್‌ಎ ಇನ್‌ಸ್ಟಿಟ್ಯೂಟ್ ಮಾನ್ಯತೆಯನ್ನು ಹಸ್ತಾಂತರಿಸಲಾಯಿತು.

■ ಮಣಿಪಾಲ್ ಅಕಾಡೆಮಿ ಆಫ್ ಹೈಯರ್ ಎಜುಕೇಶನ್ (ಮಾಹೆ) ವಿವಿಯ ಅಂಗ ಸಂಸ್ಥೆ ಮಣಿಪಾಲ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯು (ಎಂಐಟಿ)ಗೆ ಪ್ರತಿಷ್ಠಿತ ಸಿಎಫ್‌ಎ ಇನ್‌ಸ್ಟಿಟ್ಯೂಟ್ ವಿಶ್ವವಿದ್ಯಾಲಯದಿಂದ ಮಾನ್ಯತೆ ಸಿಕ್ಕಿದ್ದು, ಎಂಐಟಿಯು ಈ ಮಾನ್ಯತೆ ಪಡೆದ ಭಾರತದ ಮೊದಲ ಮತ್ತು ಏಕೈಕ ಎಂಜಿನಿಯರಿಂಗ್ ಸಂಸ್ಥೆ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ.

ಸಿಎಸ್-ಎಫ್‌ಟಿ ಕೋರ್ಸ್ ಎಂಐಟಿಯ 2023ರಿಂದ ಬಿಟೆಕ್ (ಕಂಪ್ಯೂಟರ್‌ಸೈನ್ಸ್ ಮತ್ತು ಫೈನಾನ್ಶಿಯಲ್ ಟೆಕ್ನಾಲಜಿ) ಎಂಬ ವಿನೂತನ ಕೋರ್ಸನ್ನು ಆರಂಭಿಸಿದೆ. ಕಂಪ್ಯೂಟರ್‌ಸೈನ್ಸ್ ಜತೆಗೆ ಹಣಕಾಸು, ಅನಲಿಟಿಕ್ಸ್, ತಂತ್ರಜ್ಞಾನಗಳನ್ನು ಒಳಗೊಂಡ ಅಂತರಶಿಸ್ತೀಯ ಕೋರ್ಸ್ ಪರಿಚಯಿಸಿದ ದೇಶದ ಮೊದಲ ಮತ್ತು ಏಕೈಕ ಸಂಸ್ಥೆ ಎಂಬ ಕೀರ್ತಿಗೆ ಎಂಐಟಿ ಪಾತ್ರವಾಗಿದೆ. ಇಂದಿನ ಆಧುನಿಕ ಉದ್ಯೋಗ ಮಾರುಕಟ್ಟೆಗೆ ಪೂರಕವಾದ ಪರಿಣಿತರನ್ನು ಸಿದ್ಧಪಡಿಸುವಲ್ಲಿ ಎಂಐಟಿ ಮಹತ್ವದ ಪಾತ್ರ ವಹಿಸುತ್ತಿದೆ.

ಉಜಿರೆ ಎಸ್‌ಡಿಎಂ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಗೆ ಬಿಒಬಿ ಬಗ್ಗಿ ವಾಹನ ಕೊಡುಗೆ

4.65 ಲಕ್ಷ ರು ಮೌಲ್ಯ | ಪರಿಸರ ಸ್ನೇಹಿ, ಶಬ್ದ ರಹಿತ ವಾಹನ


ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಯ ಹೊರ ಆವರಣದೊಳಗೆ ಸಂಚರಿಸಲು ಬಗ್ಗಿ ವಾಹನ ಸೇವೆ ಒದಗಿಸಿರುವುದು.

• **ಕನ್ನಡಪ್ರಭವಾರ್ತೆ** ಬೆಳ್ತಂಗಡಿ

ವಯೋವೃದ್ಧರು ಮತ್ತು ಅಶಕ್ತರಿಗೆ ಉಜಿರೆ ಎಸ್.ಡಿ.ಎಂ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಯ ಹೊರ ಆವರಣದೊಳಗೆ ಸಂಚರಿಸಲು ಬಗ್ಗಿ ವಾಹನ ಸೇವೆ ಒದಗಿಸಲಾಗಿದೆ.

ಪರಿಸರಸ್ನೇಹಿ ಮತ್ತು ಶಬ್ದರಹಿತ ವಾಹನ ಇದಾಗಿದ್ದು, ನಡೆಯಲು ಕಷ್ಟ ಪಡುವವರಿಗೆ ಆಸ್ಪತ್ರೆಯ ಹೊರ ಆವರಣದಲ್ಲಿ ಸಂಚರಿಸಲು ಬಹು ಉಪಯುಕ್ತವಾಗಿದೆ. 4.65 ಲಕ್ಷ ರು ಮೌಲ್ಯದ ಈ ವಾಹನವನ್ನು ಬ್ಯಾಂಕ್ ಆಫ್ ಬರೋಡಾ ಬ್ಯಾಂಕಿನವರು ಉಚಿತವಾಗಿ ನೀಡಿದ್ದು, ಬ್ಯಾಂಕ್ ಆಫ್ ಬರೋಡಾ ಪ್ರಾದೇಶಿಕ ಮೇನೇಜರ್ ಗಣೇಶ್ ಉಜಿನ ಮತ್ತು ಜನರಲ್ ಮೆನೇಜರ್ ರಾಜೇಶ್ ಖನ್ನಾ ಅವರು ಡಾ. ಡಿ ವೀರೇಂದ್ರ ಹೆಗ್ಗಡೆ ಅವರಿಗೆ ಬಗ್ಗಿ ವಾಹನದ ಕೀಯನ್ನುಹಸ್ತಾಂತರಿಸಿದರು.

ಈ ಸಂದರ್ಭ ಹೇಮಾವತಿ ವಿ. ಹೆಗ್ಗಡೆ, ಉಜಿರೆಎಸ್ .ಡಿ.ಎಂ ಮಲ್ಟಿ ಸ್ಪೆಷಾಲಿಟಿಆಸ್ಪತ್ರೆಯ ವ್ಯವಸ್ಥಾಪಕ ನಿರ್ದೇಶಕ ಎಂ. ಜನಾರ್ದನ್, ಬ್ಯಾಂಕ್ ಆಫ್ ಬರೋಡಾ ಬ್ಯಾಂಕಿನ ಉಜಿರೆ ಶಾಖೆಯ ಮೇನೇಜರ್ ಶಿವರಾಮ ಹಾಗೂ ಧರ್ಮಸ್ಥಳ ಶಾಖೆಯ ಮೇನೇಜರ್ ಚೈತನ್ಯಾನಂದ ಎನ್.ಇದ್ದರು.

ನೂತನ ಸದಸ್ಯರ ಸೇರಿಸಿ ಸಂಸ್ಥೆ ಬಲಪಡಿಸಿ: ರಾಮಕೃಷ್ಣ ಪಿ.ಕೆ.

ಮಂಗಳೂರು: ರೋಟರಿ ಮಂಗಳೂರು ಸಿಟಿ ಸಂಸ್ಥೆಯ ಸ್ಥಾಪನಾ ದಿನಾಚರಣೆ

• **ಕನ್ನಡಪ್ರಭ ವಾರ್ತೆ** ಮಂಗಳೂರು

ರೋಟರಿ ಸಂಸ್ಥೆಯ ಸದಸ್ಯರು ಸಂಸ್ಥೆಯಲ್ಲಿ ಕ್ರಿಯಾಶೀಲರಾಗಿ ಶ್ರಮಿಸಿ ಸಮಾಜಸೇವಾ ಕಾರ್ಯ ಚಟುವಟಿಕೆಗಳಲ್ಲಿ ಸಕ್ರೀಯವಾಗಿ ಭಾಗವಹಿಸಿ ನೂತನ ಸದಸ್ಯರನ್ನು ಸೇರ್ಪಡಿಸಿ ಸಂಸ್ಥೆಯನ್ನು ಬಲಪಡಿಸಿ ಯಶಸ್ಸು ಸಾಧಿಸಬೇಕು ಎಂದು ಮೈಸೂರು ನಗರ ಮೂಲದ ಖ್ಯಾತ ಕೈಗಾರಿಕೋದ್ಯಮಿ ಹಾಗೂ ರೋಟರಿ ಜಿಲ್ಲಾ 3181 ಗವರ್ನರ್ ರಾಮಕೃಷ್ಣ ಪಿ.ಕೆ. ಸಲಹೆ ನೀಡಿದರು.

ಅವರು ಗುರುವಾರ ನಗರದ ಮಂಗಳೂರು ಕ್ಲಬ್‌ ಸಭಾಂಗಣದಲ್ಲಿ ಆಯೋಜಿಸಿದ ರೋಟರಿ ಮಂಗಳೂರು ಸಿಟಿ ಸಂಸ್ಥೆಯ ಸ್ಥಾಪನಾ ದಿನಾಚರಣೆಯಲ್ಲಿ ಸಂಸ್ಥೆಗೆ ಅಧಿಕೃತ ಭೇಟಿ ನೀಡಿ ಸದಸ್ಯರನ್ನು ಉದ್ದೇಶಿಸಿ ಮಾತನಾಡಿದರು.

ರೋಟರಿ ಅಂತರಾಷ್ಟ್ರೀಯ ಪ್ರತಿಷ್ಠಾನಕ್ಕೆ ಉದಾರ ದಾನ ನೀಡಬೇಕು ಎಂದು ಕರೆ ನೀಡಿದರು. ಅಂತರಾಷ್ಟ್ರೀಯ ರೋಟರಿ ಆಂದೋಲನಕ್ಕೆ ಭಾರತೀಯ ರೋಟರಿ ಸಂಸ್ಥೆಗಳ ಕೊಡುಗೆ ಅಪಾರ ಮತ್ತು ಅಮೂಲ್ಯ ಎಂದರು.

ರೋಟರಿ ಜಿಲ್ಲಾ ಸಹಾಯಕ ಗವರ್ನರ್ ರೋ.ರವಿಶಂಕರ್‌ರಾವ್ ಗೌರವ ಅತಿಥಿಯಾಗಿ ಪಾಲ್ಗೊಂಡು ಪದಾಧಿಕಾರಿಗಳಿಗೆ ಸೂಕ್ತ ಸಲಹೆ ಮತ್ತು ಮಾರ್ಗದರ್ಶನ ನೀಡಿದರು.

ರೋ.ಡಾ.ರಂಜನ್ ಸಂಪಾದಕತ್ವದ ಸಂಸ್ಥೆಯ ಗೃಹ ವಾರ್ತಾ ಪತ್ರಿಕೆ ಸಿಟಿ ಬಿಟ್ಸ್ ಆಂಡ್ ಬೈಟ್ಸ್ ಯನ್ನು ಬಿಡುಗಡೆಗೊಳಿಸಿ ಸಂಸ್ಥೆಯ ಸಮಾಜಸೇವಾ ಕಾರ್ಯ ಚಟುವಟಿಕೆಗಳ ಬಗ್ಗೆ ಸಂತಸ ವ್ಯಕ್ತಪಡಿಸಿದರು.

ಸಂಸ್ಥೆಯ ಸ್ಥಾಪನಾ ಸದಸ್ಯರಾದ ರೋ. ಡಾ.ರಂಜನ್, ರೋ.ಸರಿತಾ ಡಿಸೋಜಾ, ರೋ.ಪ್ರಶಾಂತ್ ರೈ, ರೋ.ಭಸವ ಕುಮಾರ್, ರೋ.ಸುದೇಶ್ ಅವರನ್ನು ಗೌರವಿಸಲಾಯಿತು.

ಸಂಸ್ಥೆಯ ಅಧ್ಯಕ್ಷೆ ರೋ.ಸಜ್ನಾ ಭಾಸ್ಕರ್ ಅಧ್ಯಕ್ಷತೆವಹಿಸಿ ಸ್ವಾಗತಿಸಿದರು. ಕಾರ್ಯದರ್ಶಿ ರೋ.ಪದ್ಮನಾಭ್ ನಾಯ್ಕ್ ವರದಿ ಮಂಡಿಸಿದರು.

ಸಂಸ್ಥೆಯ ಸಲಹೆಗಾರ ರೋ.ರಾಜೇಂದ್ರ ಕಲ್ಬಾವಿ, ವಲಯ ಪ್ರತಿನಿಧಿ ರೋ.ಪ್ರಶಾಂತ್ ರೈ ಇದ್ದರು.

ರೋ. ಕೆನ್ಯೂಟ್ ಪಿಂಟೋ ಅತಿಥಿಗಳನ್ನು ಗುರುತಿಸಿ ಗೌರವಿಸಿದರು. ಕಾರ್ಯದರ್ಶಿ ರೋ. ಪದ್ಮನಾಭ್ ನಾಯ್ಕ್ ವಂದಿಸಿದರು.



ರೋಟರಿ ಮಂಗಳೂರು ಸಿಟಿ ಸಂಸ್ಥೆಯ ಸ್ಥಾಪನಾ ದಿನದಲ್ಲಿ ಹಾಜರಿದ್ದ ಗಣ್ಯರು.

■ ರೋಟರಿ ಅಂತರಾಷ್ಟ್ರೀಯ ಪ್ರತಿಷ್ಠಾನಕ್ಕೆ ಉದಾರ ದಾನ ನೀಡಬೇಕು ಎಂದು ಕರೆ ನೀಡಿದರು. ಅಂತರಾಷ್ಟ್ರೀಯ ರೋಟರಿ ಆಂದೋಲನಕ್ಕೆ ಭಾರತೀಯ ರೋಟರಿ ಸಂಸ್ಥೆಗಳ ಕೊಡುಗೆ ಅಪಾರ ಮತ್ತು ಅಮೂಲ್ಯ ಎಂದರು.

ರಾಮಕೃಷ್ಣ ಕೋ-ಓಪರೇಟಿವ್ ಸೊಸೈಟಿ ಪ್ರತಿಭಾ ಪುರಸ್ಕಾರ

‘ಸಂಘದ ಸದಸ್ಯರ ಪ್ರತಿಭಾವಂತ ಮಕ್ಕಳಿಂದ ಅರ್ಜಿ ಆಹ್ವಾನ’

• **ಕನ್ನಡಪ್ರಭ ವಾರ್ತೆ** ಮಂಗಳೂರು


ಕೆ.ಜೈರಾಜ್ ಬಿ. ರೈ

ಶ್ರೀ ರಾಮಕೃಷ್ಣ ಕ್ರೆಡಿಟ್ ಕೋ-ಓಪರೇಟಿವ್ ಸೊಸೈಟಿ ಲಿ. ಮಂಗಳೂರು ಇದರ ವತಿಯಿಂದ ಸಂಘದ ಸದಸ್ಯರ ಪ್ರತಿಭಾವಂತ ಮಕ್ಕಳಿಂದ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಅಹ್ವಾನಿಸಲಾಗಿದೆ ಎಂದು ಸಂಘದ ಅಧ್ಯಕ್ಷ ಕೆ. ಜೈರಾಜ್ ಬಿ. ರೈಯವರು ತಿಳಿಸಿದ್ದಾರೆ.

ಸಂಘದ ಸದಸ್ಯರ ಮಕ್ಕಳಿಗೆ 2025-26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ. 95 ಹಾಗೂ ಅದಕ್ಕಿಂತ ಹೆಚ್ಚು ಅಂಕ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ. 90 ಹಾಗೂ ಅದಕ್ಕಿಂತ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಮತ್ತು 2025-26ನೇ ಸಾಲಿನ ಶೈಕ್ಷಣಿಕ ಸಾಲಿನಲ್ಲಿ ಪಿಯುಸಿ ಉತ್ತೀರ್ಣರಾಗಿ, 2026-27ನೇ ಶೈಕ್ಷಣಿಕ ಸಾಲಿನಲ್ಲಿ

1. ಎಂ.ಬಿ.ಬಿ.ಎಸ್/ಬಿಡಿಎಸ್/ಆಯುಷ್/ವೆಟರ್ನರಿ ಮುಂತಾದ ವೈದ್ಯಕೀಯ ಶಿಕ್ಷಣ ಪದವಿ/ಸ್ನಾತಕೋತ್ತರ ವ್ಯಾಸಂಗವನ್ನು ರಾಷ್ಟ್ರೀಯ ನೀಟ್ ಪರೀಕ್ಷೆ ಮುಖೇನ ಸರ್ಕಾರಿ ಕಾಲೇಜಿನಲ್ಲಿ ಮೆರಿಟ್ ಸೀಟ್‌ನಲ್ಲಿ ದಾಖಲಾತಿ ಪಡೆದ ವಿದ್ಯಾರ್ಥಿಗಳಿಗೆ

2. ಎಂಜಿನಿಯರಿಂಗ್ ಪದವಿ/ಸ್ನಾತಕ್ಕೋತ್ತರ ವ್ಯಾಸಂಗವನ್ನು ರಾಜ್ಯ ಮತ್ತು ರಾಷ್ಟ್ರೀಯ ಪ್ರವೇಶ ಪರೀಕ್ಷೆ (ಸಿಇಟಿ/ಜೆಇಇ) ಪರೀಕ್ಷೆ ಮುಖೇನ ಸರ್ಕಾರಿ ಕಾಲೇಜಿನಲ್ಲಿ ಮೆರಿಟ್ ಸೀಟ್‌ನಲ್ಲಿ ದಾಖಲಾತಿ ಪಡೆದ ವಿದ್ಯಾರ್ಥಿಗಳಿಗೆ ಹಾಗೂ ಡಿಪ್ಲೊಮಾ ನಂತರ ಎಂಜಿನಿಯರಿಂಗ್ ಪದವಿಯ ವ್ಯಾಸಂಗವನ್ನು ರಾಜ್ಯ (ಸಿಇಟಿ) ಪರೀಕ್ಷೆ ಮುಖೇನ ಸರ್ಕಾರಿ ಕಾಲೇಜಿನಲ್ಲಿ ಮೆರಿಟ್ ಸೀಟ್‌ನಲ್ಲಿ ದಾಖಲಾತಿ ಪಡೆದ ವಿದ್ಯಾರ್ಥಿಗಳಿಗೆ,

3. ಅಗ್ರಿಕಲ್ಚರಲ್/ಫಿಶರೀಶ್ ಮತ್ತು ವೆಟರ್ನರಿ ಪದವಿ/ಸ್ನಾತಕ್ಕೋತ್ತರ ಪದವಿ ರಾಜ್ಯ ಸಿಇಟಿ ಪರೀಕ್ಷೆ ಮುಖೇನ ಸರ್ಕಾರಿ ಕಾಲೇಜಿನಲ್ಲಿ ಮೆರಿಟ್ ಸೀಟ್‌ನಲ್ಲಿ ದಾಖಲಾತಿ ಪಡೆದ ವಿದ್ಯಾರ್ಥಿಗಳಿಗೆ,

4. ಕಾನೂನು ಪದವಿ / ಸ್ನಾತಕೋತ್ತರ ವ್ಯಾಸಂಗವನ್ನು ಸಿಎಲ್‌ಇಟಿ ಪರೀಕ್ಷೆ ಮುಖೇನ ರಾಷ್ಟ್ರೀಯ ಕಾನೂನು ಕಾಲೇಜಿನಲ್ಲಿ ಮೆರಿಟ್ ಸೀಟ್‌ನಲ್ಲಿ ದಾಖಲಾತಿ ಪಡೆದ ವಿದ್ಯಾರ್ಥಿಗಳಿಗೆ,

5. ಎಂ.ಎ/ಎಂ.ಕಾಂ./ಎಂ.ಬಿ.ಎ/ಎಂ.ಎಸ್.ಎಸ್ಸಿ/ಎಂ.ಇಡಿ ಪದವಿಯಲ್ಲಿ ಶೇ.90ಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ,

6. ಪಾಲಿಟೆಕ್ನಿಕ್ ಡಿಪ್ಲೊಮಾ /ಐ.ಟಿ.ಐ/ಬಿ.ಪಿ.ಇ.ಡಿ/ಬಿ.ಇ.ಡಿ./ಡಿ.ಇ.ಡಿ ಯಲ್ಲಿ ಶೇ.90 ಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ,

7. ನರ್ಸಿಂಗ್ ಮತ್ತು ಪ್ಯಾರಾಮೆಡಿಕಲ್ ಕೋರ್ಸ್‌ಗಳಲ್ಲಿ ಶೇ.90 ಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಪ್ರತಿಭಾ ಪುರಸ್ಕಾರದ ಅರ್ಜಿಗಳು ಶ್ರೀ ರಾಮಕೃಷ್ಣ ಕ್ರೆಡಿಟ್ ಕೋ-ಓಪರೇಟಿವ್ ಸೊಸೈಟಿಯ ಎಲ್ಲ ಶಾಖೆಗಳಲ್ಲಿ ಮತ್ತು ಸಂಘದ ಅಧಿಕೃತ ವೆಬ್‌ಸೈಟ್ http://ramakrishnacredit.com/ ನಲ್ಲಿ ಲಭ್ಯವಿದ್ದು ಜೂನ್ 15, 2026 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಸದಸ್ಯರು ಇದರ ಸದುಪಯೋಗ ಪಡೆಯುವಂತೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಚಲಿಸುತ್ತಿರುವಾಗಲೇ ಹೃದಯಾಘಾತ: ಬಸ್ ಚಾಲಕ ಮೃತ್ಯು

ಕೊಡಗಿನಲ್ಲಿ ಘಟನೆ | ಖಾಸಗಿ ಬಸ್ ಭಾಗಶಃ ಪಲ್ಟಿ | ಪ್ರಯಾಣಿಕರು ಪಾರು

• **ಕನ್ನಡಪ್ರಭ ವಾರ್ತೆ** ಮಡಿಕೇರಿ

ಚಲಿಸುತ್ತಿರುವಾಗಲೇ ಚಾಲಕನಿಗೆ ಹೃದಯಾಘಾತ ಸಂಭವಿಸಿ ಬಸ್ ಅಪಘಾತಕ್ಕೀಡಾದ ಘಟನೆ ಮಡಿಕೇರಿ ಸಮೀಪದ ತಾಳತ್ ಮನೆ ಬಳಿ ಶುಕ್ರವಾರ ಮುಂಜಾನೆ 5 ಗಂಟೆ ಸುಮಾರಿಗೆ ನಡೆದಿದೆ. ಬೆಂಗಳೂರು ಮೂಲದ ಶಿವಕುಮಾರ್(50) ಮೃತರು.

ಬೆಂಗಳೂರಿನಿಂದ ಹೊರಟ ಖಾಸಗಿ ಬಸ್ ಮಡಿಕೇರಿ ಸಮೀಪದ ತಲುಪುತ್ತಿದ್ದಂತೆ ಚಾಲಕನಿಗೆ ತೀವ್ರ ಹೃದಯಾಘಾತ ಸಂಭವಿಸಿದೆ.

ಪರಿಣಾಮ ಬಸ್ ರಸ್ತೆ ಪಕ್ಕದ ಇಳಿಜಾರಿಗೆ ವಾಲಿಕೊಂಡಿದೆ. ತನಗೆ ಹೃದಯಘಾತವಾಗುತ್ತಿದ್ದಂತೆ ಚಾಲಕ ಬಸ್ ನಿಲ್ಲಿಸುವ ಪ್ರಯತ್ನ ಮಾಡಿದ್ದಾರೆ. ಹೃದಯಾಘಾತ ತೀವ್ರವಾಗುತ್ತಿದ್ದಂತೆ ಚಾಲಕ ಚರಂಡಿಯ ಬಳಿ ಬಸ್ ನಿಲ್ಲಿಸಿದ್ದಾರೆ. ಈ ವೇಳೆ ಬಸ್ ಕೊಂಚ ವಾಲಿಕೊಂಡಿದೆ. ಆದರೆ ಪ್ರಯಾಣಿಕರ ಜೀವಕ್ಕೇನು ಅಪಾಯವಾಗಿಲ್ಲ. ತಕ್ಷಣವೇ ಚಾಲಕನನ್ನು ಮಡಿಕೇರಿ ಬಳಿಯ ಆಸ್ಪತ್ರೆಗೆ ದಾಖಲಿಸಲಾಯಿತು. ಆದರೆ ಚಾಲಕ ಈ ಸಂದರ್ಭ ಮೃತಪಟ್ಟಿದ್ದಾರೆ. ಸ್ಥಳಕ್ಕೆ ಮಡಿಕೇರಿ ಸಂಚಾರ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದರು. ರಸ್ತೆ ಬದಿಯಲ್ಲಿ ಬಸ್ ವಾಲಿಕೊಂಡು ನಿಂತ ಕಾರಣ ಹೆದ್ದಾರಿಯಲ್ಲಿ ಇತರ ವಾಹನ ಸಂಚಾರಕ್ಕೆ ಯಾವುದೇ ಅಡೆ ತಡೆ ಆಗಿಲ್ಲ. ಇತ್ತ ಘಟನೆಯಿಂದ ಆತಂಕಗೊಂಡ ಪ್ರಯಾಣಿಕರಿಗೆ ಬೇರೆ ವಾಹನಗಳ ವ್ಯವಸ್ಥೆ ಮಾಡಲಾಗಿದೆ.



■ ಚಲಿಸುತ್ತಿರುವಾಗಲೇ ಚಾಲಕನಿಗೆ ಹೃದಯಾಘಾತ ಸಂಭವಿಸಿ ಬಸ್ ಅಪಘಾತಕ್ಕೀಡಾದ ಘಟನೆ ಮಡಿಕೇರಿ ಸಮೀಪದ ತಾಳತ್ ಮನೆ ಬಳಿ ಶುಕ್ರವಾರ ಮುಂಜಾನೆ 5 ಗಂಟೆ ಸುಮಾರಿಗೆ ನಡೆದಿದೆ.

■ ಬೆಂಗಳೂರಿನಿಂದ ಹೊರಟ ಖಾಸಗಿ ಬಸ್ ಮಡಿಕೇರಿ ಸಮೀಪದ ತಲುಪುತ್ತಿದ್ದಂತೆ ಚಾಲಕನಿಗೆ ತೀವ್ರ ಹೃದಯಾಘಾತ ಸಂಭವಿಸಿದೆ. ಪರಿಣಾಮ ಬಸ್ ರಸ್ತೆ ಪಕ್ಕದ ಇಳಿಜಾರಿಗೆ ವಾಲಿಕೊಂಡಿದೆ

ಸಮಾಜಮುಖಿ | ವಿಶ್ವ ರೆಡ್‌ಕ್ರಾಸ್ ದಿನಾಚರಣೆ ಉದ್ಘಾಟನೆ

ಉದಾತ್ತ ಸೇವಾ ಕಾರ್ಯಗಳಿಗೆ ರೆಡ್‌ಕ್ರಾಸ್ ಪ್ರೇರಣೆ: ವೇದವ್ಯಾಸ ಕಾಮತ್

• **ಕನ್ನಡಪ್ರಭ ವಾರ್ತೆ** ಮಂಗಳೂರು

ಯಾವುದೇ ಪ್ರತಿಫಲಾಪೇಕ್ಷೆಯಿಲ್ಲದೆ ರಕ್ತದಾನ, ವಿಪತ್ತು ನಿರ್ವಹಣೆಯಂತಹ ಉದಾತ್ತ ಕಾರ್ಯಗಳಲ್ಲಿ ತೊಡಗಿರುವ ರೆಡ್‌ಕ್ರಾಸ್ ಸಂಸ್ಥೆ ಮಾನವೀಯ ಸೇವೆಯಲ್ಲಿ ತೊಡಗಿಸಿಕೊಳ್ಳಲು ವಿದ್ಯಾರ್ಥಿಗಳಿಗೆ ಮತ್ತು ಯುವ ಜನತೆಗೆ ಪ್ರೇರಣೆಯಾಗಿದೆ ಎಂದು ಮಂಗಳೂರು ದಕ್ಷಿಣ ಶಾಸಕ ವೇದವ್ಯಾಸ ಕಾಮತ್ ಹೇಳಿದರು.

ಭಾರತೀಯ ರೆಡ್‌ಕ್ರಾಸ್ ಸೊಸೈಟಿಯ ದ.ಕ.ಜಿಲ್ಲಾ ಘಟಕದ ವತಿಯಿಂದ ಯೂತ್ ರೆಡ್‌ಕ್ರಾಸ್ ಮಂಗಳೂರು ವಿ.ವಿ. ಸಹಯೋಗದಲ್ಲಿ ನಗರದ ರೆಡ್‌ಕ್ರಾಸ್ ಶತಮಾನೋತ್ಸವ ಭವನದ ಪ್ರೇರಣಾ ಸಭಾಂಗಣದಲ್ಲಿ ಶುಕ್ರವಾರ ನಡೆದ ವಿಶ್ವ ರೆಡ್‌ಕ್ರಾಸ್ ದಿನಾಚರಣೆ ಉದ್ಘಾಟಿಸಿ ಅವರು ಮಾತನಾಡಿದರು.

ರೆಡ್‌ಕ್ರಾಸ್ ದ.ಕ.ಜಿಲ್ಲಾ ಘಟಕ ಬಡವರಿಗೆ ತುರ್ತು ಸಂದರ್ಭ ಉಚಿತವಾಗಿ ರಕ್ತ ಪೂರೈಸಲು ಮುಂದಾಗಿದ್ದು ಸಾರ್ವಜನಿಕ ಸಂಘ, ಸಂಸ್ಥೆಗಳು ಮತ್ತು ವಿದ್ಯಾರ್ಥಿಗಳು ರಕ್ತದಾನ ಶಿಬಿರಗಳನ್ನು ಆಯೋಜಿಸುವ ಮೂಲಕ ರೆಡ್‌ಕ್ರಾಸ್‌ನ ಮಾನವೀಯ ಸೇವೆಗೆ ಸಹಕರಿಸಬೇಕು ಎಂದು ಶಾಸಕರು ವಿನಂತಿಸಿದರು.

ರೆಡ್‌ಕ್ರಾಸ್ ದ.ಕ.ಜಿಲ್ಲಾ ಘಟಕದ ಚೇರ್ಮನ್ ಸಿಎ ಶಾಂತಾರಾಮ ಶೆಟ್ಟಿ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದ ಅಂಗವಾಗಿ ಏರ್ಪಡಿಸಲಾದ ಯೂತ್ ರೆಡ್‌ಕ್ರಾಸ್ ವಿಚಾರ ಸಂಕಿರಣದಲ್ಲಿ ಸುರತ್ಕಲ್ ಎನ್‌ಐಟಿಕೆಯ ಸಹಪ್ರಾಧ್ಯಾಪಕಿ ಡಾ.ರಶ್ಮಿ ಸುಧೀರ್‌ಉಚ್ಚಿಲ್ ಮತ್ತು ಡಿ ಅಡಿಕ್ಷನ್ ಸಮಾಲೋಚಕಿ ಡಾ.ಕುಸುಮ್ ತಂತ್ರಿ ಡೆಸಾ ಅವರು ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿದ್ದರು.

ರೆಡ್‌ಕ್ರಾಸ್ ಜಿಲ್ಲಾ ಘಟಕದ ಉಪಾಧ್ಯಕ್ಷ ಡಾ. ಬಿ.ಸಚ್ಚಿದಾನಂದ ರೈ, ಖಜಾಂಜಿ ಗುರುದತ್ ನಾಯಕ್, ನಿರ್ದೇಶಕರಾದ ಡಾ.ಸತೀಶ್ ರಾವ್, ಪಿ.ಬಿ.ಹರೀಶ್ ರೈ, ರಾಘವೇಂದ್ರ ರಾವ್ ಇದ್ದರು.

ಯೂತ್ ರೆಡ್‌ಕ್ರಾಸ್ ಉಪ ಸಮಿತಿ ನಿರ್ದೇಶಕಿ ಡಾ.ಸುಮನ ಬಿ.ಸ್ವಾಗತಿಸಿದರು. ಮಂಗಳೂರು ವಿ.ವಿ. ಯೂತ್ ರೆಡ್‌ಕ್ರಾಸ್‌ನ ನೋಡಲ್ ಅಧಿಕಾರಿ ಡಾ.ಗಾಯಂತ್ರಿ ಎನ್. ವಂದಿಸಿದರು. ವಿದ್ಯಾರ್ಥಿನಿ ರಕ್ಷಾ ನಿರೂಪಿಸಿದರು.

ಯೂತ್ ರೆಡ್‌ಕ್ರಾಸ್ ವಿಚಾರ ಸಂಕಿರಣದಲ್ಲಿ ನಡೆದ ಯೂತ್ ರೆಡ್‌ಕ್ರಾಸ್ ವಿಚಾರ ಮಂಡನೆ ಸ್ಪರ್ಧೆಯಲ್ಲಿ ವಿವಿಧ ಕಾಲೇಜಿನ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ವಿಚಾರ ಮಂಡನೆ ಸ್ಪರ್ಧಾ ವಿಜೇತರು: ಪ್ರಥಮ : ಸುನೈನಾ (ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಪುಂಜಾಲಕಟ್ಟೆ), ದ್ವಿತೀಯ : ಝೀನತ್ ಝುಲ್ಫಾ (ಯೇನೆಪೋಯ ಆಯುರ್ವೇದ ಮೆಡಿಕಲ್ ಕಾಲೇಜ್, ಮಂಗಳೂರು), ತೃತೀಯ : ಕೌಶಿಕ್ (ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ರಥಬೀದಿ, ಮಂಗಳೂರು).



ಶಾಸಕ ವೇದವ್ಯಾಸ್ ಕಾಮತ್ ಮಾತನಾಡುತ್ತಿರುವುದು.

■ ಯಾವುದೇ ಪ್ರತಿಫಲಾಪೇಕ್ಷೆಯಿಲ್ಲದೆ ರಕ್ತದಾನ, ವಿಪತ್ತು ನಿರ್ವಹಣೆಯಂತಹ ಉದಾತ್ತ ಕಾರ್ಯಗಳಲ್ಲಿ ತೊಡಗಿರುವ ರೆಡ್‌ಕ್ರಾಸ್ ಸಂಸ್ಥೆ ಮಾನವೀಯ ಸೇವೆಯಲ್ಲಿ ತೊಡಗಿಸಿಕೊಳ್ಳಲು ವಿದ್ಯಾರ್ಥಿಗಳಿಗೆ ಮತ್ತು ಯುವ ಜನತೆಗೆ ಪ್ರೇರಣೆಯಾಗಿದೆ ಎಂದು ಮಂಗಳೂರು ದಕ್ಷಿಣ ಶಾಸಕ ವೇದವ್ಯಾಸ ಕಾಮತ್ ಹೇಳಿದರು.

ಸರ್ಕಾರಕ್ಕೆ ಮೂರು ವರ್ಷ ತುಂಬಿದ ಬಳಿಕ ಸಂಪುಟ ವಿಸ್ತರಣೆ: ದಿನೇಶ್ ಗುಂಡೂರಾವ್

• **ಕನ್ನಡಪ್ರಭ ವಾರ್ತೆ** ಮಂಗಳೂರು



ಸರ್ಕಾರಕ್ಕೆ ಮೂರು ವರ್ಷ ತುಂಬಿದ ನಂತರ ಸಚಿವ ಸಂಪುಟ ವಿಸ್ತರಣೆ ಮಾಡಬೇಕು ಎಂಬ ತೀರ್ಮಾನ ಇದೆ. ಕೇರಳದಲ್ಲಿ ಸರ್ಕಾರ ರಚನೆ ಆದ ನಂತರ ನಮ್ಮ ವರಿಷ್ಠರು ಕರ್ನಾಟಕದ ಬಗ್ಗೆ ತೀರ್ಮಾನ ತೆಗೆದುಕೊಳ್ಳುತ್ತಾರೆ ಎಂದು ದ.ಕ.ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದರು.

ಅವರು ಶುಕ್ರವಾರ ಮಂಗಳೂರಿನಲ್ಲಿ ಪತ್ರಕರ್ತರ ಜೊತೆ ಮಾತನಾಡಿದರು.

ಯಾರು ಏನೇನು ಪ್ರಯತ್ನ ಮಾಡ್ತಾ ಇದಾರೋ ನನಗೆ ಗೊತ್ತಿಲ್ಲ. ಯಾರು ಯಾವ ದಿನಾಂಕ ನಿಗದಿ ಮಾಡಲು ಸಾಧ್ಯವಿಲ್ಲ.

ಅಂತಿಮವಾಗಿ ನಮ್ಮ ಹೈಕಮಾಂಡ್, ಖರ್ಗೆ, ರಾಹುಲ್ ಗಾಂಧಿ, ಸೋನಿಯಾ ಗಾಂಧಿ ತೀರ್ಮಾನ ತಗೆದುಕೊಳ್ಳುತ್ತಾರೆ. ಸಮಯ, ಮುಹೂರ್ತ ಎಲ್ಲಾ ಅವರ ವಿವೇಚನೆಗೆ ಬಿಟ್ಟಿರುವಂತದ್ದು ಎಂದರು.

ತಮಿಳುನಾಡಿನಲ್ಲಿ ಸಚಿವ ಸ್ಥಾನಕ್ಕೆ ಕಾಂಗ್ರೆಸ್ ಭಿಕ್ಷೆ ಬೇಡುತ್ತಿದೆ ಎಂಬ ಚಲವಾದಿ ನಾರಾಯಣಸ್ವಾಮಿ ಹೇಳಿಕೆಗೆ ಸಂಬಂಧಿಸಿದಂತೆ ಉತ್ತರಿಸಿದ ದಿನೇಶ್ ಗುಂಡೂರಾವ್, ಅವರ ಹೆಸರು ಓಡ್ತಾ ಇರ್ಬೇಕು ಅಂತಾ ಇಂತ ಹೇಳಿಕೆ ಕೊಡ್ತಾರೆ. ಅಂತಹ ಪ್ರಶ್ನೆಗೆ ಉತ್ತರ ಕೊಡೊ ಅವಶ್ಯಕತೆ ಇಲ್ಲ. ರಾಹುಲ್ ಗಾಂಧಿ ಮತ್ತು ವಿಜಯ್‌ಗೆ ಮೊದಲಿಂದನೂ ಸ್ನೇಹ-ಸಂಪರ್ಕವಿತ್ತು. ಬಹಳ ಹಿಂದೆ ಅವರು ಎನ್‌ಎಸ್‌ಯುಐಗೆ ಬರಬೇಕು ಅಂತಾ ಕೂಡ ಇತ್ತು.

8 ವರ್ಷದ ಹಿಂದೆ ಮಾತುಕತೆ ನಡೆದಿತ್ತು ಎಂದರು.

16ರಂದು ಕೆಯುಡಬ್ಲ್ಯುಜೆ ದತ್ತಿನಿಧಿ ಪ್ರಶಸ್ತಿ ಪ್ರದಾನ, ಕನ್ನಡ ಸಂಸ್ಕೃತಿ ಉತ್ಸವ

ಶಾಫಿ ಬಂಡಸಾಲ ದುಬೈ ಅವರ 'ಮನದಾಳದಿಂದ' ಪುಸ್ತಕ ಲೋಕಾರ್ಪಣೆ | ಸಾಧಕರಿಗೆ ಸನ್ಮಾನ

• **ಕನ್ನಡಪ್ರಭ ವಾರ್ತೆ** ಮಂಗಳೂರು

ಕಾಸರಗೋಡು ಜಿಲ್ಲಾ ಕನ್ನಡ ಪತ್ರಕರ್ತರ ಕ್ಷೇಮಾಭಿವೃದ್ಧಿ ಸಂಘ, ಕರ್ನಾಟಕ ಗಡಿಪ್ರದೇಶ ಅಭಿವೃದ್ಧಿ ಪ್ರಾಧಿಕಾರ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಬೆಂಗಳೂರು ಸಂಯುಕ್ತ ಆಶ್ರಯದಲ್ಲಿ ಕಾಸರಗೋಡು ಜಿಲ್ಲಾ ಕನ್ನಡ ಪತ್ರಕರ್ತರ ಕ್ಷೇಮಾಭಿವೃದ್ಧಿ ಸಂಘದ ದತ್ತಿನಿಧಿ ಪ್ರಶಸ್ತಿ ಪ್ರದಾನ ಹಾಗೂ ಕನ್ನಡ ಸಂಸ್ಕೃತಿ ಉತ್ಸವ 16ರಂದು ಬೆಳಗ್ಗೆ 9 ರಿಂದ ಸುಬ್ಬಯ್ಯಕಟ್ಟೆ ಕುಡಾಲ್ ಮೇರ್ಕಳದ ಕುಡಾಲು ಅನುದಾನಿತ ಕಿ.ಪ್ರಾ.ಶಾಲೆ ವಠಾರದಲ್ಲಿ ನಡೆಯಲಿದೆ ಎಂದು ಕಾಸರಗೋಡಿನ ಗಡಿನಾಡ ಸಾಹಿತ್ಯ ಸಾಂಸ್ಕೃತಿಕ ಅಕಾಡೆಮಿ ಸಂಸ್ಥಾಪಕ ಎಸ್.ಪ್ರದೀಪ್ ಕುಮಾರ್ ಕಲ್ಕೂರ ತಿಳಿಸಿದರು.

ಶುಕ್ರವಾರಸುದ್ದಿಗೋಷ್ಠಿಯಲ್ಲಿಮಾತನಾಡಿದ ಅವರು, ಕರ್ನಾಟಕ ರಾಜ್ಯ ಸಣ್ಣ ನಿರಾವರಿ ಸಚಿವ ಎನ್.ಎಸ್. ಭೋಸರಾಜು ಕಾರ್ಯಕ್ರಮ ಉದ್ಘಾಟಿಸುವರು. ನಿಯೋಜಿತ ಮಂಜೇಶ್ವರ ಶಾಸಕ ಎ.ಕೆ.ಎಂ.ಆಶ್ರಫ್ ಅಧ್ಯಕ್ಷತೆ ವಹಿಸುವರು. ಕರ್ನಾಟಕ ವಿಧಾನಸಭೆ ಉಪ ಸಭಾಧ್ಯಕ್ಷ ರುದ್ರಪ್ಪ ಲಮಾಣಿ ದತ್ತಿನಿಧಿ ಪ್ರಶಸ್ತಿ ಪ್ರದಾನ ಮಾಡುವರು. ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸೋಮಣ್ಣ ಬೇವಿನಮರದ ಗಡಿನಾಡ ಸಾಧಕರನ್ನು ಸನ್ಮಾನಿಸುವರು. ಕರ್ನಾಟಕ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್‌ಪತ್ರಕರ್ತರ ಗುರುತುಚೀಟಿ ವಿತರಿಸುವರು. ಶಾಫಿ ಬಂಡಸಾಲ ದುಬೈ ಅವರ 'ಮನದಾಳದಿಂದ' ಪುಸ್ತಕವನ್ನು ಕರ್ನಾಟಕ ಕನಿಷ್ಠ ವೇತನ ಸಲಹಾ ಮಂಡಳಿ ಅಧ್ಯಕ್ಷ ಟಿ. ಎಂ.ಶಹೀದ್ ಲೋಕಾರ್ಪಣೆಗೊಳಿಸುವರು ಎಂದರು.

ಕಾಸರಗೋಡು ಜಿಲ್ಲಾ ಪಂಚಾಯಿತಿ ಅಧ್ಯಕ್ಷ ಸಾಬು ಅಬ್ರಹಾಂ, ಸದಸ್ಯ ಸೋಮಶೇಖರ್ ಜೆಎಸ್., ಕರ್ನಾಟಕಕಾರ್ಯನಿರತಪತ್ರಕರ್ತರ ಸಂಘ ಬೆಂಗಳೂರು ಅಧ್ಯಕ್ಷ ಶಿವಾನಂದ ತಗಡೂರು, ಕ.ಸಾ.ಪ ಕೇರಳ ಘಟಕ ಅಧ್ಯಕ್ಷ ಡಾ.ಜಯಪ್ರಕಾಶ್ ನಾರಾಯಣ ತೊಟ್ಟೆತ್ತೋಡಿ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ, ದ.ಕ.ಜಿಲ್ಲಾ ಸಮಿತಿ, ಮಂಗಳೂರು ಅಧ್ಯಕ್ಷ ಪುಷ್ಪರಾಜ್ ಬಿ.ಎನ್.. ಕೆ.ಯು.ಡಬ್ಲ್ಯೂ.ಜೆ. ಕರ್ನಾಟಕ ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಶ್ರೀನಿವಾಸ ನಾಯಕ್ ಇಂದಾಜೆ. ಕೇರಳ ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ರಾಧಾಕೃಷ್ಣ ಕೆ ಉಳಿಯತಡ್ಕ, ಗಡಿನಾಡ ಉತ್ಸವ ಸಮಿತಿ ಮಸ್ಕತ್ ಪ್ರಧಾನ ಸಂಚಾಲಕ ಶಿವಾನಂದ ಕೋಟ್ಯಾನ್, ಮಂಗಳೂರು ದ.ಕ. ಜಿಲ್ಲಾ ವಾರ್ತಾಧಿಕಾರಿ ಖಾದರ್‌ಶಾ, ಕರ್ನಾಟಕ ಗಡಿ ಪ್ರದೇಶಅಭಿವೃದ್ಧಿಪ್ರಾಧಿಕಾರಸದಸ್ಯರುಗಳಾದ ಭಗತರಾಜ್ ನಿಜಾಮಕರ್, ಜಾಣಗೆರೆ ವೆಂಕಟರಾಮಯ್ಯ, ಡಾ.ಎಂ.ಎಸ್. ಮದಭಾವಿ, ಅಶೋಕ ಚಂದರಗಿ, ಡಾ. ಸಂಜೀವ ಕುಮಾರ್‌ಅತಿವಾಳೆ, ಶಿವರೆಡ್ಡಿ ಖ್ಯಾಡೆದ್, ಕೆ.ಯು.ಡಬ್ಲ್ಯೂ.ಜೆ. ಕಾಸರಗೋಡುಅಧ್ಯಕ್ಷಎ.ಆರ್.ಸುಬ್ಬಯ್ಯಕಟ್ಟೆ, ಕಜಾಪ ದ.ಕ.ಜಿಲ್ಲಾ ಸಮಿತಿ ಅಧ್ಯಕ್ಷ ಪ್ರವೀಣ್ ಕುಮಾರ್‌ಕೊಡಿಯಾಲ್ ಬೈಲ್, ಗಡಿನಾಡ ಸಾಹಿತ್ಯ ಸಾಂಸ್ಕೃತಿಕ ಅಕಾಡೆಮಿ, ಕಾಸರಗೋಡು ಅಧ್ಯಕ್ಷ ಎನ್.ಚನಿಯಪ್ಪ ನಾಯ್ಕ, ಕಾಸರಗೋಡು ಜಿಲ್ಲಾ ಕನ್ನಡ ಪತ್ರಕರ್ತರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ರವಿ ನಾಯ್ಕಾಪು, ಪ್ರಧಾನ ಕಾರ್ಯದರ್ಶಿ ಗಂಗಾಧರ ತೆಕ್ಕೆಮೂಲೆ, ಸೌಮ್ಯ ಗೌಡ ಬೆಂಗಳೂರು, ಹರಿದಾಸ ಜಯಾನಂದ ಕುಮಾರ ಹೊಸದುರ್ಗ ಆಗಮಿಸುವರು ಎಂದರು.

ಶೋಭಾಯಾತ್ರೆ, ಸಾಂಸ್ಕೃತಿಕ ಕಾರ್ಯಕ್ರಮ: ಪೈವಳಿಕೆ ಗ್ರಾ.ಪಂ. ಅಧ್ಯಕ್ಷೆ ಬದರುನ್ನೀಸ ಸಲೀಂ ಮತ್ತು ಹಿರಿಯ ಸಮಾಜ ಸೇವಕ ಭಂಡಾರಗುತ್ತು ಸೀತಾರಾಮ ಶೆಟ್ಟಿ ಬೆಳಗ್ಗೆ 9ಕ್ಕೆ ಶೋಭಾಯಾತ್ರೆಗೆ ಚಾಲನೆ ನೀಡುವರು. 9.30ರಿಂದ ಗೋನಾ ಸ್ವಾಮಿ, ಡಾ.ಕೆ.ಎನ್. ನಾಗೇಶ್ ಬೆಂಗಳೂರು ಮತ್ತು ಬಳಗದ ಸುಗಮ ಸಂಗೀತ, 10ರಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದೆ.

ಸ್ವಾಗತ ಸಮಿತಿ ಅಧ್ಯಕ್ಷ ಸೋಮಶೇಖರ ಜೆ. ಎಸ್., ಪ್ರಧಾನ ಸಂಚಾಲಕ ಅಶೋಕ ಭಂಡಾರಿ ಕುಡಾಲ್, ಸಂಚಾಲಕ ರಾಘವ ಚೇರಾಲ್, ಯುಡಬ್ಲ್ಯೂ ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ರಾಧಾಕೃಷ್ಣ ಉಳಿಯತ್ತಡ್ಕ, ಜಿಲ್ಲಾಧ್ಯಕ್ಷ ಎ.ಆರ್.ಸುಬ್ಬಯ್ಯ ಕಟ್ಟೆ, ಕಾಸರಗೋಡು ಜಿಲ್ಲಾ ಕನ್ನಡ ಪತ್ರಕರ್ತರ ಕ್ಷೇಮಾಭಿವೃದ್ಧಿ ಸಂಘ ಅಧ್ಯಕ್ಷ ರವಿ ನಾಯ್ಕಾಪು, ಕಜಾಪ ದ.ಕ. ಜಿಲ್ಲಾ ಸಮಿತಿ ಅಧ್ಯಕ್ಷ ಪ್ರವೀಣ್ ಕುಮಾರ್ ಕೊಡಿಯಾಲಬೈಲ್ ಇದ್ದರು.



ಪ್ರದೀಪ್ ಕುಮಾರ್ ಕಲ್ಕೂರ ಸುದ್ದಿಗೋಷ್ಠಿಯಲ್ಲಿ ಮಾತನಾಡುತ್ತಿರುವುದು

■ ಕಾಸರಗೋಡು ಜಿಲ್ಲಾ ಕನ್ನಡ ಪತ್ರಕರ್ತರ ಕ್ಷೇಮಾಭಿವೃದ್ಧಿ ಸಂಘದ ದತ್ತಿನಿಧಿ ಪ್ರಶಸ್ತಿ ಪ್ರದಾನ ಹಾಗೂ ಕನ್ನಡ ಸಂಸ್ಕೃತಿ ಉತ್ಸವ 16ರಂದು ಬೆಳಗ್ಗೆ 9 ರಿಂದ ಸುಬ್ಬಯ್ಯಕಟ್ಟೆ ಕುಡಾಲ್ ಮೇರ್ಕಳದ ಕುಡಾಲು ಅನುದಾನಿತ ಕಿ.ಪ್ರಾ.ಶಾಲೆ ವಠಾರದಲ್ಲಿ ನಡೆಯಲಿದೆ: ಕಾಸರಗೋಡಿನ ಗಡಿನಾಡ ಸಾಹಿತ್ಯ ಸಾಂಸ್ಕೃತಿಕ ಅಕಾಡೆಮಿ ಸಂಸ್ಥಾಪಕ ಎಸ್.ಪ್ರದೀಪ್ ಕುಮಾರ್ ಕಲ್ಕೂರ

ಪುರಸಭಾ ಕಾರ್ಯಾಲಯ, ಬಿಡದಿ

ಬಿಡದಿ ಮುಖ್ಯ ರಸ್ತೆ, ರಾಮನಗರ ತಾಲ್ಲೂಕು, ಬೆಂಗಳೂರು ದಕ್ಷಿಣ ಜಿಲ್ಲೆ – 562109
ದೂರವಾಣಿ : 080–27282572 e-mail: ka.bidadi.tmc@gmail.com
website: http://www.bidaditown.mrc.gov.in

ಸಂ: ಪುಕಾಬಿ/ಆ.ಶಾ/ಇ–ಟೆಂಡರ್/ಸಿಆರ್/02/2025–26 ದಿನಾಂಕ: 08.05.2026

ಅಲ್ಪಾವಧಿ ಮರು ಟೆಂಡರ್ ಪ್ರಕಟಣೆ (ಕೆ.ಪಿ.ಪಿ.ಪಿ. ಪೋರ್ಟಲ್ ಮುಖಾಂತರ ಮಾತ್ರ)

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅದ್ಯಾದೇಶ 1999–2000ರ ಪ್ರಕಾರ ಆಕ್ಟ್ 2000ರ ನಿಯಮದಂತೆ ಸ್ಟ್ಯಾಂಡರ್ಡ್ ಟೆಂಡರ್ ಡಾಕ್ಯೂಮೆಂಟ್‌ನ ಕೆ.ಪಿ.ಪಿ.ಪಿ. ಪೋರ್ಟಲ್ ಮುಖಾಂತರ **ಪುರಸಭಾ ನಿಧಿ ಅನುದಾನದಡಿ** ಟೆಂಡರ್‌ನ್ನು ಆಹ್ವಾನಿಸಿದ್ದು, ಅರ್ಹ ಗುತ್ತಿಗೆದಾರರು ಕೆ.ಪಿ.ಪಿ.ಪಿ ಪೋರ್ಟಲ್ **https://kppp.karnataka.gov.in** ಮುಖಾಂತರ ಕರೆದಿರುವ ಟೆಂಡರ್‌ನಲ್ಲಿ ಭಾಗವಹಿಸಬಹುದು. ಮುಂದುವರೆದಂತೆ ಇಂಡೆಂಟ್ ನಂ ಹಾಗೂ ಅಂದಾಜು ಮೊತ್ತಗಳಂತೆ **(1)** DMA/2025-26/SE5674/CALL-3 (Other, **73.54 Lakhs** EMD - **147082/-**) ಗಳಿದ್ದು, ಕೆ.ಪಿ.ಪಿ.ಪಿ. ಪೋರ್ಟಲ್ **https://kppp.karnataka.gov.in** ಮುಖಾಂತರ ಡೌನ್‌ಲೋಡ್ ಮಾಡಿಕೊಂಡು **ದಿನಾಂಕ: 16.05.2026ರ ಸಂಜೆ 5:30 ಗಂಟೆ ಒಳಗಾಗಿ ಅಪ್‌ಲೋಡ್** ಮಾಡಬಹುದಾಗಿರುತ್ತದೆ. ಟೆಂಡರ್ ದಾಖಲೆಗಳಲ್ಲಿ ತಿಳಿಸಿರುವಂತೆ ಎಲ್ಲಾ ಅಗತ್ಯ ದಾಖಲೆಗಳನ್ನು ಸಲ್ಲಿಸುವುದು. ಹೆಚ್ಚಿನ ವಿವರಗಳನ್ನು ಈ ಕಛೇರಿಯ ಆರೋಗ್ಯ ಶಾಖೆಯಿಂದ ಪಡೆಯಬಹುದು.

ಸಹಿ/– **ಅಧ್ಯಕ್ಷರು**, ಪುರಸಭೆ, ಬಿಡದಿ
ಸಹಿ/– **ಮುಖ್ಯಾಧಿಕಾರಿ**, ಪುರಸಭೆ, ಬಿಡದಿ
DIPR/BSD/51/SA/2026-27

ಕರ್ನಾಟಕ ಸರ್ಕಾರ
ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ

6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–560003.
ದೂರವಾಣಿ: 080–23349434, e-mail: dpikseab@gmail.com
ಸಂಖ್ಯೆ: KSEAB/DPIE/B4(OTR)/1/2026-BSEC/90135 ದಿನಾಂಕ: 08.05.2026

ಇ–ಟೆಂಡರ್ ಪ್ರಕಟಣೆ

ನಿರ್ದೇಶಕರು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, ಇವರು **"2026 ನೇ ಸಾಲಿನ ಎಸ್.ಎಸ್.ಎಲ್.ಸಿ ಮತ್ತು ಇತರೆ ಪರೀಕ್ಷೆಗಳ ಪೂರ್ವ ಮುದ್ರಿತ ಉತ್ತೀರ್ಣ ಪ್ರಮಾಣಪತ್ರಗಳು, ಪರಿವರ್ತನೀಯ ದತ್ತಾಂಶಗಳ ಮೇಲುಮುದ್ರಣ ಸಹಿತ ಸರಬರಾಜು"** ಕಾರ್ಯಕ್ಕೆ ಅರ್ಹ ಸಂಸ್ಥೆಗಳಿಂದ ಇ–ಟೆಂಡರ್ ಅರ್ಜಿಗಳನ್ನು ಕೆ.ಟಿ.ಪಿ.ಪಿ. ಅಧಿನಿಯಮ–1999 ಮತ್ತು ಕೆ.ಟಿ.ಪಿ.ಪಿ. ನಿಯಮಗಳು–2000, ಅಡಿಯಲ್ಲಿ ಆಹ್ವಾನಿಸಲಾಗಿದೆ.

ಟೆಂಡರ್‌ಗಳನ್ನು ಕರ್ನಾಟಕ ಸರ್ಕಾರದ ಇ–ಸಂಗ್ರಹಣಾ ವೇದಿಕೆ ಮೂಲಕ ಮಾತ್ರ ಸಲ್ಲಿಸತಕ್ಕದ್ದು. ಟೆಂಡರ್ ದಸ್ತಾವೇಜುಗಳನ್ನು ಮಂಡಲಿಯ ಅಂತರ್ಜಾಲತಾಣ **https://Kseab.karnataka.gov.in** ಮತ್ತು **https://kppp.karnataka.gov.in** ಮೂಲಕ ಡೌನ್‌ಲೋಡ್ ಮಾಡಿಕೊಳ್ಳಬಹುದು. ಟೆಂಡರ್ ಪ್ರಾರಂಭ **ದಿನಾಂಕ: 08.05.2026,** ಟೆಂಡರ್ ಪೂರ್ವ ಬಿಡ್ ಸಭೆ **ದಿನಾಂಕ: 15.05.2026ರ ಪೂರ್ವಾಹ್ನ 11.30 ಗಂಟೆ,** ಟೆಂಡರ್ ಸಲ್ಲಿಸಲು ಅಂತಿಮ **ದಿನಾಂಕ: 22.05.2026ರ ಸಂಜೆ 5.00 ಗಂಟೆ.** ತಾಂತ್ರಿಕ ಬಿಡ್ ತೆರೆಯುವ **ದಿನಾಂಕ: 25.05.2026ರ ಪೂರ್ವಾಹ್ನ 11.30 ಗಂಟೆ,** ವಾಣಿಜ್ಯ ಬಿಡ್ ತೆರೆಯುವ ತಾತ್ಕಾಲಿಕ **ದಿನಾಂಕ: 27.05.2026 ಪೂರ್ವಾಹ್ನ 11.30 ಗಂಟೆ,** ಸದರೀ ಟೆಂಡರ್‌ನ ಅಂದಾಜು ಮೌಲ್ಯ **ರೂ.30,14,000/–** ಮತ್ತು ಮುಂಗಡ ಠೇವಣಿ **ರೂ.60,280/– ಗಳಾಗಿದ್ದು** ಹೆಚ್ಚಿನ ವಿವರಗಳನ್ನು ಮಂಡಲಿಯಿಂದ ಕಛೇರಿ ವೇಳೆಯಲ್ಲಿ ಪಡೆಯಬಹುದಾಗಿರುತ್ತದೆ.

ಸಹಿ/– ನಿರ್ದೇಶಕರು, ಪರೀಕ್ಷೆಗಳು

ಕರ್ನಾಟಕ ರಾಜ್ಯ ಕರಕುಶಲ ಅಭಿವೃದ್ಧಿ ನಿಗಮ ನಿಯಮಿತ

(ಕರ್ನಾಟಕ ಸರ್ಕಾರದ ಒಂದು ಉದ್ಯಮ)
ನಂ.45, 3ನೇ ಮಹಡಿ, ಕೆ.ಎಸ್.ಹೆಚ್.ಡಿ.ಸಿ.ಎಲ್ ಕಾಂಪ್ಲೆಕ್ಸ್, ಎಂ.ಜಿ.ರಸ್ತೆ, ಬೆಂಗಳೂರು–01. ದೂ: 080–25582656/ 71204445/ 71204446
ಇ–ಮೇಲ್: **gmmkshdcl@gmail.com**
ವೆಬ್‌ಸೈಟ್:**http://www.cauverycrafts.com**
ಕಡತದ ಸಂಖ್ಯೆ: ಕೆಎಸ್‌ಹೆಚ್‌ಡಿಸಿಎಲ್/ಎಂಕೆಟಿಜಿ/ಇ–ಟೆಂಡರ್/137/2026–27, ದಿನಾಂಕ: 08.05.2026
ಟೆಂಡರ್ ಉಲ್ಲೇಖ ಸಂಖ್ಯೆ: ಕೆಎಸ್‌ಹೆಚ್‌ಡಿಸಿಎಲ್/2026–27/ಐಎನ್‌ಡಿ0017

ಅಲ್ಪಾವಧಿ ಇ–ಟೆಂಡರ್ ಪ್ರಕಟಣೆ

ಕರ್ನಾಟಕ ರಾಜ್ಯ ಕರಕುಶಲ ಅಭಿವೃದ್ಧಿ ನಿಗಮ ನಿಯಮಿತವು (ಕೆಎಸ್‌ಹೆಚ್‌ಡಿಸಿಎಲ್) ಪ್ರಕಟಣೆಯಲ್ಲಿ ನಿರ್ದಿಷ್ಟಪಡಿಸಿರುವ ವಿವರಣೆಯಂತೆ ಅನುಮೋದನೆ ಮೇಲೆ ಮಾರಾಟದ (ಎಸ್‌ಒಎ) ಆಧಾರದ ಮೇಲೆ **ಚಿನ್ನದ ಲೇಪನ ಮಾಡಿದ, ಗಂಡಬೇರುಂಢ ಇರುವ 92.5 ಸ್ಟರ್ಲಿಂಗ್ ಬೆಳ್ಳಿ ಪದಕಗಳು ಜೊತೆಗೆ ಅಗತ್ಯ ಸಹಾಯಕ ಭಾಗಗಳ ತಯಾರಿಕೆ ಮತ್ತು ಸರಬರಾಜಿಗಾಗಿ** ಅರ್ಹ ಟೆಂಡರುದಾರರುಗಳಿಂದ ದ್ವಿ ಲಕೋಟೆ ಟೆಂಡರ್ ಕ್ರಮದಲ್ಲಿ ಅಲ್ಪಾವಧಿ ಇ–ಟೆಂಡರ್ ಆಹ್ವಾನಿಸಿರುವುದು. ಟೆಂಡರ್ ಪ್ರಕಟಣೆ ವಿವರಗಳನ್ನು ವೆಬ್‌ಸೈಟ್: **www.kppp.karnataka.gov.in** ಇಲ್ಲಿಗೆ ಲಾಗಿನ್ ಆಗುವ ಮೂಲಕ ಇ–ಪ್ರೊಕ್ಯೂರ್‌ಮೆಂಟ್ ವಿಧಾನದಲ್ಲಿ ಪಡೆದುಕೊಳ್ಳಬಹುದು. ಟೆಂಡರ್ ದಸ್ತಾವೇಜುಗಳನ್ನು ಪಡೆಯಲು ಪ್ರಾರಂಭವಾಗುವ **ದಿನಾಂಕ: 08.05.2026.** ಬಿಡ್‌ಗಳನ್ನು ಸಲ್ಲಿಸುವ ಕಡೆಯ ದಿನಾಂಕ ಮತ್ತು ಸಮಯ: **15.05.2026.**

ಸಹಿ/– ಪ್ರಧಾನ ವ್ಯವಸ್ಥಾಪಕರು (ಮಾರುಕಟ್ಟೆ)

ಕರ್ನಾಟಕ ಸರ್ಕಾರ ಕರ್ನಾಟಕ ಅರಣ್ಯ ಇಲಾಖೆ
ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳ ಕಚೇರಿ, ಕಾರವಾರ ಉಪ–ವಿಭಾಗ, ಕಾರವಾರ

ಎಂಜಿ ರಸ್ತೆ, ಕಾಜುಬಾಗ, ಕಾರವಾರ–581301. (ಉ.ಕ.)
ದೂರವಾಣಿ: 08382–226365 ಇ–ಮೇಲ್: acfkwr@gmail.com
ನಂ. ಸಿ3/ಸಅಸಂ/ವಿವ–/ಇ–ಮರುಟೆಂಡರ್–6/2025–26 ದಿನಾಂಕ: 02–05–2026

ಟೆಂಡರ್ ಪ್ರಕಟಣೆ

2026–27ನೇ ಸಾಲಿಗೆ ವಿವಿಧ ಯೋಜನೆಯಡಿ 2026ನೇ ಮಳೆಗಾಲದಲ್ಲಿ ನೆಡುತೋಪು ರಚನೆ / ನಿರ್ವಹಣೆ, ನರ್ಸರಿ ಕಾಮಗಾರಿ ಇತ್ಯಾದಿ ಕಾಮಗಾರಿ ಸಂಕ್ಷಿಪ್ತ ಇ–ಟೆಂಡರ ಕರೆಯಲಾಗಿರುತ್ತದೆ. ಮರು ಇ–ಟೆಂಡರ್ ಸ್ವೀಕರಿಸುವ ಕೊನೆಯ ದಿನಾಂಕ: 12–05–2026 ಆಗಿದ್ದು, ಹೆಚ್ಚಿನ ಮಾಹಿತಿಗಾಗಿ ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ಕಚೇರಿ, ಕಾರವಾರ ವಿಭಾಗ, ಕಾರವಾರ ರವರನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸುವದು. (ದೂರವಾಣಿ ಸಂಖ್ಯೆ: 08382–226365).

DIPR/KWR/KSMCA/113/26-27 Dt. 07.05.2026

ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ

GTTC
ರಾಜಾಜಿನಗರ ಕೈಗಾರಿಕಾ ವಸಾಹತು, ಬೆಂಗಳೂರು–560 010.
ದೂ.ಸಂ.: 080–23152118/119, 23384303,
ಫ್ಯಾಕ್ಸ್: 080–23301683, ವೆಬ್‌ಸೈಟ್: https://gttc.karnataka.gov.in

ಎಲೆಕ್ಟ್ರಾನಿಕ್ ಟೆಂಡರ್ ಪ್ರಕಟಣೆ

ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರವು (ಜಿಟಿಟಿಸಿ), **ಟರ್ನ್ ಕೀ ಆಧಾರದ ಮೇಲೆ ಇಂಡಸ್ಟ್ರಿಯಲ್ ಕಂಟ್ರೋಲ್ ಸಿಸ್ಟಮ್ ಮತ್ತು ಆಟೋಮೇಷನ್‌ನಲ್ಲಿ ಜಾಗತಿಕ ಸಾಮರ್ಥ್ಯ ಕೇಂದ್ರವನ್ನು ಸ್ಥಾಪಿಸಲು ಇ–ಟೆಂಡರ್ ಆಹ್ವಾನಿಸಿದೆ.** GTTC/MSDC/TENDER/ICS&ALab./BD-288/2025-26 ಇ–ಟೆಂಡರ್ ಮೂಲಕ ಆಫರ್‌ಗಳನ್ನು ಅಪ್‌ಲೋಡ್ ಮಾಡಲು **ಕೊನೆಯ ದಿನಾಂಕ: 10.06.2026.** ಇನ್ನಿತರೆ ವಿವರಗಳಿಗಾಗಿ ವೆಬ್‌ಸೈಟ್ **https:/kppp.Karnataka.gov.in**ಗೆ ಲಾಗ್‌ಆನ್ ಆಗಿ. **ಸಹಾಯವಾಣಿ ಸಂಖ್ಯೆ : +91 9240214000, +91 9240214001.**

ಸಹಿ/– ಟೆಂಡರ್ ಆಹ್ವಾನಿಸುವ ಪ್ರಾಧಿಕಾರ

ಕರ್ನಾಟಕ ಸರ್ಕಾರ
ಕರ್ನಾಟಕ ಮೃಗಾಲಯ ಪ್ರಾಧಿಕಾರ
ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳವರ/ ಉಪ ನಿರ್ದೇಶಕರವರ ಕಾರ್ಯಾಲಯ ಮಕ್ಕಳ ಉದ್ಯಾನವನ ಮತ್ತು ಕಿರು ಮೃಗಾಲಯ ಕಲಬುರಗಿ

ಇಮೇಲ್: dcf_tgulbarga@yahoo.co.in ಕಛೇರಿ ದೂ. ಸಂ. 08472-256601
ಸಂಖ್ಯೆ: ಉನಿ/ಕಿ.ಮೃ/ಹೊರಗುತ್ತಿಗೆ ನೌಕರರ/ಟೆಂಡರ್/ಸಿ.ಆರ್/2026–27 ದಿನಾಂಕ : 07–05–2026

:: ಅಲ್ಪಾವಧಿಯ ಇ–ಟೆಂಡರ್ ಪ್ರಕಟಣೆ ::

(**Karnataka Public Procurement Portal ನಡಿಯಲ್ಲಿ ಮಾತ್ರ**)

ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು/ಉಪ ನಿರ್ದೇಶಕರು ಮಕ್ಕಳ ಉದ್ಯಾನವನ ಮತ್ತು ಕಿರು ಮೃಗಾಲಯ ಕಲಬುರಗಿ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸಲು ಮಾನವ ಸಂಪನ್ಮೂಲ ಒದಗಿಸುವ ಟೆಂಡರನ್ನು Karnataka Public Procurement Portal ನಡಿಯಲ್ಲಿ ಆಹ್ವಾನಿಸಲಾಗಿದ್ದು. **ಸದರಿ ವಿವರ ಈ ಕೆಳಗಿನಂತಿವೆ.**
ವಿವರ : ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು/ಉಪ ನಿರ್ದೇಶಕರು ಮಕ್ಕಳ ಉದ್ಯಾನವನ ಮತ್ತು ಕಿರು ಮೃಗಾಲಯ ಕಲಬುರಗಿ ರವರಿಂದ ಇ–ಟೆಂಡರ್ ಆಹ್ವಾನಿಸಲಾಗಿದೆ.
1) ಕಾಮಗಾರಿ : ಮಕ್ಕಳ ಉದ್ಯಾನವನ ಮತ್ತು ಕಿರು ಮೃಗಾಲಯ ಕಲಬುರಗಿ ಹೊರಗುತ್ತಿಗೆ ಆಧಾರದ ಮೇಲೆ ಕೆಲಸ ನಿರ್ವಹಿಸಲು ಮಾನವ ಸಂಪನ್ಮೂಲ ಒದಗಿಸುವ ಟೆಂಡರ್, 2) ಟೆಂಡರ್‌ಗಿಟ್ಟ ಮೊತ್ತ : **ಕನಿಷ್ಠ ರೂ. 57.00 ಲಕ್ಷ, ಗರಿಷ್ಠ ರೂ. 57.00 ಲಕ್ಷ,** 3) ಲೆಕ್ಕ ಶೀರ್ಷಿಕೆ : ZAK, 4) ಅರ್ಹತೆ : As per tender documents, 5) ಟೆಂಡರ್‌ಗೆ ಸಂಬಂಧಿಸಿದಂತೆ, ಪ್ರಶ್ನೆಗಳು ಮತ್ತು ಸ್ಪಷ್ಟಿಕರಣ ಕೇಳಲು ಕೊನೆಯ ದಿನಾಂಕ : **13–05–2026 ಸಾಯಂಕಾಲ 4.00 ಗಂಟೆಗೆ,** 6) ತಾಂತ್ರಿಕ ಹಾಗೂ ಆರ್ಥಿಕ ಬಿಡ್‌ಗಳನ್ನು ಸಲ್ಲಿಸಲು ಕೊನೆಯ ದಿನಾಂಕ : **14–05–2026 ಸಾಯಂಕಾಲ 4.00 ಗಂಟೆಗೆ,** 7) ತಾಂತ್ರಿಕ ಬಿಡ್‌ಗಳನ್ನು ತೆರೆಯುವ ದಿನಾಂಕ: **15–05–2026 ರಂದು ಸಾಯಂಕಾಲ 4.30 ಗಂಟೆಗೆ,** 8) ಆರ್ಥಿಕ ಬಿಡ್‌ಗಳನ್ನು ತೆರೆಯುವ ದಿನಾಂಕ: **17–05–2026 ರಂದು ಸಾಯಂಕಾಲ 5.00 ಗಂಟೆಗೆ,** 9) ಹೆಚ್ಚಿನ ವಿವರಗಳಿಗಾಗಿ ಸಂಪರ್ಕಿಸಬೇಕಾದ ವಿಳಾಸ : ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು/ಉಪ ನಿರ್ದೇಶಕರು ಮಕ್ಕಳ ಉದ್ಯಾನವನ ಮತ್ತು ಕಿರು ಮೃಗಾಲಯ ಕಲಬುರಗಿ, ಎಸ್.ಬಿ. ಟೆಂಪಲ್ ರೋಡ, ಕಲಬುರಗಿ. 10) ಅಂತರಜಾಲ ತಾಣದ ವಿಳಾಸ : http:kppp.karnataka.gov.in

ಸಹಿ/– ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು/ಉಪ ನಿರ್ದೇಶಕರು
ಮಕ್ಕಳ ಉದ್ಯಾನವನ ಮತ್ತು ಕಿರು ಮೃಗಾಲಯ ಕಲಬುರಗಿ

ವಾ.ಸಾ.ಸಂ.ಇ/ಕಲಬುರಗಿ/102/ಕೆ.ಎಸ್.ಎಂ.ಸಿ.&ಎ/2026–27

ಕರ್ನಾಟಕ ಸರ್ಕಾರ
ಕಾರ್ಯಲಯ ಕಾರ್ಯನಿರ್ವಾಹಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಬೀದರ.

ಸಂ: ಕಾನಿಅ/ಪಂರಾಇಂವಿ/ಬೀದರ/ತಾಶಾ–2/2026–27/159 ದಿನಾಂಕ: 07.05.2026

ಅಲ್ಪಾವಧಿ ಟೆಂಡರ್ ಪ್ರಕಟಣೆ, (ಇ–ಪ್ರೊಕ್ಯೂರಮೆಂಟ್)

ಕರ್ನಾಟಕ ರಾಜ್ಯಪಾಲರ ಪರವಾಗಿ ಕಾರ್ಯನಿರ್ವಾಹಕ ಅಭಿಯಂತರರು, ಪಂಚಾಯತ ರಾಜ್ ಇಂಜಿನಿಯರಿಂಗ ವಿಭಾಗ, ಬೀದರ ಇವರಿಂದ ವಿವಿಧ ಯೋಜನೆಯಡಿ ಮಂಜೂರಾದ 27 ಕಾಮಗಾರಿಗಳಿಗೆ (ಕನಿಷ್ಟ **ರೂ. 4,15,820.42** (Rupees Four Lakhs Fifteen Thousand Eight Hundred Twenty and paise forty two only) ಮತ್ತು ಗರಿಷ್ಠ **167,84,805.38 ಮೊತ್ತದ** (Rupees One Crore Sixty Seven Lakhs Eighty Four Thousand Eight Hundred Five and paise thirty eight only) ಗುತ್ತಿಗೆದಾರರನ್ನು ನೇಮಿಸಲು, ಲೋಕೋಪಯೋಗಿ ಇಲಾಖೆಯಲ್ಲಿ ನೋಂದಾಯಿತ ಅರ್ಹ ಗುತ್ತಿಗೆದಾರರಿಂದ ಕೆ.ಟಿ.ಪಿ.ಪಿ. ಕಾಯ್ದೆ ಹಾಗೂ ಕೆ.ಡಬ್ಲ್ಯೂ–01, 02, 03 ಹಾಗೂ 04ರ ನಿಬಂಧನೆಗೊಳಪಟ್ಟು ಕೆ.ಪಿ.ಪಿ.ಪಿ.ನಲ್ಲಿ ಟೆಂಡರ್‌ಗಳನ್ನು ಆಹ್ವಾನಿಸಲಾಗಿದೆ. ಹೆಚ್ಚಿನ ವಿವರಗಳಿಗಾಗಿ ಅಂತರಜಾಲ ತಾಣ https://kppp.karnataka.gov.inನ್ನು ಸಂಪರ್ಕಿಸಬಹುದು.(Work Indent No:– 26578, 26406, 26564, 26561, 26547, 26013, 26247, 25188, 25189, 25190, 26293, 26291, 26289, 21574/CALL–2, 26405, 26546, 26545, 26442, 26441, 26440, 26439, 25393/CALL–2, 25447, 26548, 26580, 24965/CALL–2, 24968/CALL–2). ಟೆಂಡರ್ ಪ್ರಕ್ರಿಯೆ ದಿನಾಂಕಗಳು: 1. ಇ–ಪ್ರಾಕ್‌ನಲ್ಲಿ ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ : 08.05.2026 ರಿಂದ 18.05.2026 16:00 ಗಂಟೆವರೆಗೆ 2. ತಾಂತ್ರಿಕ ಬಿಡ್ ತೆರೆಯುವ ದಿನಾಂಕ : 19.05.2026 ರಂದು 16:00 ಗಂಟೆ ನಂತರ 3. ಅರ್ಥಿಕ ಬಿಡ್ ತೆರೆಯುವ ದಿನಾಂಕ : 22.05.2026 ರಂದು 11:00 ಗಂಟೆ ನಂತರ

ಸಹಿ/–ಕಾರ್ಯನಿರ್ವಾಹಕ ಅಭಿಯಂತರರು, ಪಂ.ರಾ.ಇಂ. ವಿಭಾಗ, ಬೀದರ.
ವಾ.ಸಾ.ಸಂ.ಇ/ಬೀದರ/30/ಕೆ.ಎಸ್.ಎಂ.ಸಿ.&ಎ/2026–27

ಪುರಸಭಾ ಕಾರ್ಯಾಲಯ, ಪಿರಿಯಾಪಟ್ಟಣ

ಮೈಸೂರು ಜಿಲ್ಲೆ – 571107, ದೂ: 08223–273036
ಇ–ಮೇಲ್: itstaff_ulb_periyapatna@yahoo.com
ಸಂಖ್ಯೆ: ಪಿಪುಸ/ಪ.ಅ/ಟೆಂಡರ್–01–04/2026–27 **ದಿನಾಂಕ:** 06.05.2026

ಮರು ಟೆಂಡರ್ ಪ್ರಕಟಣೆ (ಕೆಪಿಪಿಪಿ ಪೋರ್ಟಲ್ ಮೂಲಕ)

ಪಿರಿಯಾಪಟ್ಟಣ ಪುರಸಭೆಯ ವಿವಿಧ ಸೇವೆಗಳನ್ನು ಅರ್ಹರಿಂದ ಪಡೆಯಲು 1999 ಹಾಗೂ 2000ರ ಪಾರದರ್ಶಕ ಕಾಯ್ದೆಗೆ ಒಳಪಟ್ಟು ಪ್ರತ್ಯೇಕವಾಗಿ ಟೆಂಡರ್‌ಗಳನ್ನು ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳ ಟೆಂಡರ್‌ದಾರರು **https://kppp.karnataka.gov.in** ಪೋರ್ಟಲ್ ಮೂಲಕ ಟೆಂಡರ್ ಷರತ್ತು ಹಾಗೂ ದಸ್ತಾವೇಜನ್ನು ಡೌನ್‌ಲೋಡ್ ಮಾಡಿಕೊಂಡು ಆನ್‌ಲೈನ್ ಮುಖಾಂತರ ಟೆಂಡರ್‌ಗಳನ್ನು ಸಲ್ಲಿಸಬಹುದು. **1)** ಟೆಂಡರ್‌ನ್ನು ಸಲ್ಲಿಸಲು ಕಡೆಯ **ದಿನಾಂಕ: 21.05.2026 ಸಂಜೆ 5:00 ಗಂಟೆಯವರೆಗೆ. 2)** ಟೆಂಡರ್ ತೆರೆಯುವ **ದಿನಾಂಕ: 22.05.2026ರ ಬೆಳಿಗ್ಗೆ 11.00 ಗಂಟೆಗೆ** ಅಥವಾ ಮುಂದೆ ಸೂಚಿಸುವ ದಿನಾಂಕದಂದು ತೆರೆಯಲಾಗುವುದು.

ಕ್ರ. ಸಂ.	ವಿವರ	ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ)	ಇ.ಎಂ.ಡಿ ಮೊತ್ತ (ರೂ.ಗಳಲ್ಲಿ)	ಕಾಲಾವಧಿ
1	DMA/2026-27/SE7686/CALL-2	16.10	40250	12 ತಿಂಗಳು
2	DMA/2026-27/SE7671/CALL-2	6.38	15970	12 ತಿಂಗಳು

ಸೂಚನೆ: 1) ಕಾರಣಾಂತರಗಳಿಂದ ಮೇಲೆ ತಿಳಿಸಿದ ಟೆಂಡರ್ ದಿನಾಂಕಗಳು ಹಾಗೂ ಇತರೆ ಬದಲಾವಣೆಗಳಾದಲ್ಲಿ ದಿನಪತ್ರಿಕೆಗಳಲ್ಲಿ ಪ್ರಕಟಿಸಲಾಗುವುದಿಲ್ಲ, ಕೆಪಿಪಿಪಿ ಪೋರ್ಟಲ್‌ನಲ್ಲಿ ಸೂಚಿಸಲಾಗುವುದು. ಹೆಚ್ಚಿನ ವಿವರಗಳನ್ನು ಗುತ್ತಿಗೆದಾರರು **https://kppp.karnataka.gov.in** ಪೋರ್ಟಲ್‌ನಲ್ಲಿ ನೋಡಿಕೊಳ್ಳುವುದು.

ಸಹಿ/– ಮುಖ್ಯಾಧಿಕಾರಿ, ಪುರಸಭೆ, ಪಿರಿಯಾಪಟ್ಟಣ
DIPR/MYS/148/SA/2026-27

ಕರ್ನಾಟಕ ಸರ್ಕಾರ – ಕರ್ನಾಟಕ ಅರಣ್ಯ ಇಲಾಖೆ
ಉಪ ಅರಣ್ಯ ಸಂರಕ್ಷಣಾಧಿಕಾರಿಯವರ ಕಛೇರಿ, ಶಿವಮೊಗ್ಗ ವಿಭಾಗ, ಶಿವಮೊಗ್ಗ

ಪ್ರಾದೇಶಿಕ ವಿಭಾಗ ಕಛೇರಿ ಡಿ.ಸಿ ಕಾಂಪೌಂಡ್, ಶಿವಮೊಗ್ಗ–577201
phone:08182-272210 FAX No: 08182-22565 EmailID: dcf.shivamoga@gmail.com
ಸಂಖ್ಯೆ: ಬಿ2/ಲಾಗಿಂಗ್/ಇ–ಹರಾಜು/ಆಲ್ಕೋಳ/ಸಿಆರ್–28/ ದಿನಾಂಕ: 28.04.2026

ಅರಣ್ಯ ಉತ್ಪನ್ನಗಳ ಇ–ಹರಾಜಿಗೆ ಸಂಬಂಧಪಟ್ಟ ಟೆಂಡರ್ ಪ್ರಕಟಣೆ

ಈ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ, ಶಿವಮೊಗ್ಗ ವಿಭಾಗದ ಸರ್ಕಾರಿ ನಾಟಾ ಸಂಗ್ರಹಾಲಯ, ಆಲೋಳ, ಶಿವಮೊಗ್ಗ ಇಲ್ಲಿ ದಾಸ್ತಾನು ಇರುವ ನಾಟಾ/ ಸೌದೆ/ ಬಿಲ್ಲೇಟ್/ ಪೋಲ್ಸ್ ಗಳನ್ನು ದಿನಾಂಕ: 30–05–2026 ರಂದು ಇ–ಹರಾಜು ಮೂಲಕ ವಿಲೇವಾರಿ ಮಾಡಲು ದಿನಾಂಕವನ್ನು ನಿಗದಿಪಡಿಸಲಾಗಿರುತ್ತದೆ. ಸದರಿ ಹರಾಜಿನಲ್ಲಿ ಈ ಕಛೇರಿಯ ಸವಿಸ್ತಾರ ಹರಾಜು ಪುಕಟಣೆ ಸಂಖ್ಯೆ: ಬಿ2/ಲಾಗಿಂಗ್/ಇ–ಹರಾಜು/ಆಲ್ಕೋಳ/ಸಿಆರ್–28/2025–26 ದಿನಾಂಕ: 28–04–2026 ರಲ್ಲಿ ತಿಳಿಸಿರುವ ಷರತ್ತಿಗೊಳಪಟ್ಟು ಹರಾಜಿನಲ್ಲಿ ಭಾಗವಹಿಸಬಹುದಾಗಿದೆ. ಇ ಹರಾಜಿಗೆ ಸಂಬಂಧಿಸಿದಂತೆ ಹೆಚ್ಚಿನ ಮಾಹಿತಿಗಾಗಿ ಕಛೇರಿಯ ವೇಳೆಯಲ್ಲಿ ಈ ಕಛೇರಿಯಲ್ಲಿ ಸಂಪರ್ಕಿಸಬಹುದಾಗಿರುತ್ತದೆ.ಹಾಗೂ ಇ–ಹರಾಜಿನ ಕುರಿತು ವಿವರಗಳನ್ನು ಕರ್ನಾಟಕ ಸರ್ಕಾರದ ಅಧಿಕೃತ ವೆಬ್‌ಸೈಟ್ www.etimber.in www.mstcecommerce.com ಮೂಲಕ ಪಡೆದುಕೊಳ್ಳಬಹುದಾಗಿರುತ್ತದೆ.

ಇ–ಹರಾಜಿಗೆ ಇಟ್ಟಿರುವ ಅರಣ್ಯ ಉತ್ಪನ್ನಗಳ ವಿವರ

ಕ್ರ ಸಂ	ಉಗ್ರಾಣದ ಹೆಸರು	ಉತ್ಪನ್ನಗಳ ವಿವರ		ಲಾಟ್ ಸಂಖ್ಯೆ	ಅಂದಾಜು ಪ್ರಮಾಣ (ಎಂ3 ಗಳಲ್ಲಿ)	ದಿನಾಂಕ ಮತ್ತು ಸೆಷನ್ಸ್
1	ಜಿ.ಟಿ.ಡಿ ಆಲ್ಕೋಳ ಶಿವಮೊಗ್ಗ	ಅಕೇಶಿಯಾ	ನಾಟಾ	120	6819-1173.277	30.05.2026 4 ession
2		ಅಕೇಶಿಯಾ ಸ್ಪಿಂಗ್ ವೆಲ್	ನಾಟಾ	05	7=1.353	
3		ಬೀಟೆ	ನಾಟಾ	51	253=20.329	
4		ಸಾಗುವಾನಿ	ನಾಟಾ	105	835=46.873	
5		ಇತರೆ ಜಾತಿ	ನಾಟಾ	148	375=93.488	
6		ಅಕೇಶಿಯಾ	ಸೈಜಸ್	01	5=0.055	
7		ಬೀಟೆ	ಸೈಜಸ್	03	28=1.340	
8		ಸಾಗುವಾನಿ	ಸೈಜಸ್	12	85=2.764	
9		ಇತರೆ ಜಾತಿ	ಸೈಜಸ್	03	20=0.383	
10		ಅಕೇಶಿಯಾ	ಪೋಲ್ಸ್	14	278 ಸಂಖ್ಯೆ	
11		ಅಕೇಶಿಯಾ ಸ್ಪಿಂಗ್ ವೆಲ್	ಪೋಲ್ಸ್	01	03 ಸಂಖ್ಯೆ	
12		ಬೀಟೆ	ಪೋಲ್ಸ್	01	04 ಸಂಖ್ಯೆ	
13		ಸಾಗುವಾನಿ	ಪೋಲ್ಸ್	14	229 ಸಂಖ್ಯೆ	
14		ಇತರೆ ಜಾತಿ	ಪೋಲ್ಸ್	06	325ಸಂಖ್ಯೆ	
15		ಅಕೇಶಿಯಾ	ಬಿಲ್ಲೇಟ್ಸ್	03	32.506	
16		ಬೀಟೆ	ಬಿಲ್ಲೇಟ್ಸ್	03	1.848	
17		ಸಾಗುವಾನಿ	ಬಿಲ್ಲೇಟ್ಸ್	04	1.061	
18		ಎನ್.ಟಿ.ಎಫ್.ಪಿ	–	01	60 ಸಂಖ್ಯೆ	
		ಒಟ್ಟು ಲಾಟ್ ಸಂಖ್ಯೆ		495		

ಸಹಿ/– ಉಪ ಅರಣ್ಯ ಸಂರಕ್ಷಣಾಧಿಕಾರಿ, ಶಿವಮೊಗ್ಗ ವಿಭಾಗ, ಶಿವಮೊಗ್ಗ.
ವಾ.ಸಾ.ಸಂ.ಇ/ಕೆಎಸ್‌ಎಂಸಿಎ/ಶಿ/26–27/35/05/204

ಕರ್ನಾಟಕ ಸರ್ಕಾರ
ಮುಖ್ಯಕಾರ್ಯನಿರ್ವಹಣಾಧಿಕಾರಿಗಳ ಕಛೇರಿ, ಪಿ.ಎಂ ಪೋಷಣ್ ಶಕ್ತಿ ನಿರ್ಮಾಣ್ (ಮ.ಉ.ಯೋ) ಕೊಡಗು ಜಿಲ್ಲಾ ಪಂಚಾಯತ್, ಮಡಿಕೇರಿ.

email: eokodagumms@gmail.com
ಅದಾ:ಆಹಾರ ಸಾಗಾಣಿಕೆ ಟೆಂಡರ್/11/2025–26 ದಿನಾಂಕ:06.05.2026

ಆಹಾರ ಸಾಗಾಣಿಕೆ ಟೆಂಡರ್ e-procurement ಪ್ರಕಟಣೆ

ಕೊಡಗು ಜಿಲ್ಲೆಯ ಮೂರು ತಾಲ್ಲೂಕುಗಳ ಕೆ.ಎಫ್.ಸಿ.ಎಸ್.ಸಿ ಗೋದಾಮಿನಿಂದ ಅಕ್ಕಿ, ಗೋಧಿ, ತೊಗರಿಬೇಳೆ, ಸೂರ್ಯಕಾಂತಿ ಎಣ್ಣೆ ಆಹಾರ ಸಾಮಾಗ್ರಿಗಳನ್ನು ಆಯಾ ತಾಲ್ಲೂಕುಗಳ ಸರ್ಕಾರಿ ಮತ್ತು ಅನುದಾನಿತ ಶಾಲಾ ಅಡುಗೆ ಕೇಂದ್ರಗಳಿಗೆ ಸರಬರಾಜು ಮಾಡಲು ಮುಖ್ಯಕಾರ್ಯನಿರ್ವಾಹಣಾಧಿಕಾರಿಗಳು, ಕೊಡಗು ಜಿಲ್ಲಾ ಪಂಚಾಯತ್, ಮಡಿಕೇರಿರವರಿಂದ ತಾಲ್ಲೂಕುವಾರು ಟೆಂಡರ್‌ಗಳನ್ನು e-procurement ಮೂಲಕ ಆಹ್ವಾನಿಸಲಾಗಿದೆ. (www.kppp.karnataka.gov.in) ಆಸಕ್ತಿಯುಳ್ಳವರು ಆರ್.ಸಿ ಹೊಂದಿದ (ಆರ್.ಟಿ.ಓ ಕಛೇರಿಯಲ್ಲಿ ನೊಂದಾಯಿಸಲ್ಪಟ್ಟ) ಲಾರಿ ಮಾಲಿಕರು, ಟೆಂಡರ್ ಹಾಕಲು ಇಚ್ಛೆ ಉಳ್ಳವರು KPPP portal ರಲ್ಲಿ ತಿಳಿಸಿದಂತೆ Tender Processing Fee ಯನ್ನು ಆನ್‌ಲೈನ್ ಮೂಲಕ ಸಲ್ಲಿಸತಕ್ಕದ್ದು, ಹೆಚ್ಚಿನ ವಿವರಗಳಿಗಾಗಿ www.eproc.karnataka.gov.in ಮೂಲಕ ಮಾಹಿತಿಯನ್ನು ಪಡೆಯಬಹುದಾಗಿದೆ.

1	ಟೆಂಡರ್ ಸಲ್ಲಿಸಲು ಪ್ರಾರಂಭ ದಿನಾಂಕ	ದಿನಾಂಕ:11.05.2026ರ ಬೆಳಗ್ಗೆ 10.30 ರಿಂದ
2	e-Tender ಸಲ್ಲಿಸಲು ಕೊನೆಯ ದಿನಾಂಕ	ದಿನಾಂಕ: 25.05.2026ರ ಸಂಜೆ 05.30 ಗಂಟೆ
3	ತಾಂತ್ರಿಕ ಬಿಡ್ ತೆರೆಯುವ ದಿನಾಂಕ	ದಿನಾಂಕ:27.05.2026 ರ ಬೆಳಿಗ್ಗೆ 11.30 ಗಂಟೆ
4	ಆರ್ಥಿಕ ಬಿಡ್ ತೆರೆಯುವ ದಿನಾಂಕ	ದಿನಾಂಕ:29.05.2026 ರ ಬೆಳಿಗ್ಗೆ 11.30 ಗಂಟೆ

ಕ್ರ. ಸಂ	ತಾಲ್ಲೂಕು	ಅಡುಗೆ ಕೇಂದ್ರಗಳ ಸಂಖ್ಯೆ	ಇ.ಎಂ.ಡಿ ಮೊತ್ತ (ರೂ.ಗಳಲ್ಲಿ)
1	ಮಡಿಕೇರಿ	128	9350/–
2	ವಿರಾಜಪೇಟೆ	152	14625/–
3	ಸೋಮವಾರಪೇಟೆ	174	13800/–

ಹೆಚ್ಚಿನ ವಿವರಗಳಿಗೆ www.kppp.karnataka.gov.in KPPP portal ಅಥವಾ ಶಿಕ್ಷಣಾಧಿಕಾರಿಗಳು, ಕೊಡಗು ಜಿಲ್ಲಾ ಪಂಚಾಯತ್, ಮಡಿಕೇರಿ ರವರ ಕಛೇರಿ ಕೆಲಸದ ವೇಳೆಯಲ್ಲಿ ಸಂಪರ್ಕಿಸಿ ಮಾಹಿತಿ ಪಡೆಯಬಹುದು.

ಸಹಿ/– ಶಿಕ್ಷಣಾಧಿಕಾರಿಗಳು,
ಪಿ.ಎಂ.ಪೋಷಣ್ ಶಕ್ತಿ ನಿರ್ಮಾಣ್ (ಮ.ಉ.ಯೋ)
ಕೊಡಗು ಜಿಲ್ಲಾ ಪಂಚಾಯತ್, ಮಡಿಕೇರಿ

ತುಮಕೂರು ನಗರಾಭಿವೃದ್ಧಿ ಪ್ರಾಧಿಕಾರ

ಬೆಳಗುಂಬ ರಸ್ತೆ, ತುಮಕೂರು – 572103 ಫ್ಯಾಕ್ಸ್ : 0816–2255761 ದೂರವಾಣಿ : 2272280
website: tumakuru.uda.gov.in, email: tudatmk2009@yahoo.co.in
ಕ್ರಮಾಂಕ ಟಿಯುಡಿಎ/ಸಮುದಾಯ ಭವನ/ಇ–ಹರಾಜು/01/2026–27 ದಿನಾಂಕ : 07–05–2026

ಇ–ಹರಾಜು ಪ್ರಕಟಣೆ

ಮರಳೂರು ಸರ್ವೆ ನಂಬರ್‌ನಲ್ಲಿ ನಿರ್ಮಿಸಿರುವ ಸಮುದಾಯ ಭವನದ ನಿರ್ವಹಣೆಗೆ ಇ–ಹರಾಜು ಪ್ರಕಟಣೆ

1)	ಇ–ಹರಾಜಿನ ಪ್ರಕ್ರಿಯೆಯು ಪ್ರಾರಂಭವಾಗುವ ದಿನಾಂಕ	:	ದಿನಾಂಕ : 07–05–2026
2)	ಇ–ಹರಾಜಿನಲ್ಲಿ ಪಾಲ್ಗೊಳ್ಳಲು ಪ್ರೋಸೆಸಿಂಗ್ ಶುಲ್ಕ ಮತ್ತು ಇ.ಎಂ.ಡಿ ಪಾವತಿಸುವ ಕೊನೆಯ ದಿನಾಂಕ ಹಾಗೂ ಸಮಯ	:	ದಿನಾಂಕ : 21–05–2026 ಸಾಯಂಕಾಲ : 5.00 ಗಂಟೆವರೆಗೆ
3)	ಇ–ಹರಾಜಿನಲ್ಲಿ ಬಿಡ್ ಮಾಡುವ ಸಮಯ	:	ದಿನಾಂಕ : 22–05–2026 ರ ಬೆಳಿಗ್ಗೆ 10.00 ಗಂಟೆಯಿಂದ ಸಾಯಂಕಾಲ 5.00 ಗಂಟೆಗೆ ಮುಕ್ತಾಯಗೊಳ್ಳುತ್ತದೆ. (ಡೆಲ್ಟಾ ಟೈಮ್ 0.05.00 ನಿಮಿಷ)

ತುಮಕೂರು ನಗರದ ಕುಣಿಗಲ್ ರಸ್ತೆ ಹಾಗೂ ರಿಂಗ್ ರಸ್ತೆಗೆ ಹೊಂದಿಕೊಂಡಂತೆ ಇರುವ ಪ್ರಾಧಿಕಾರದಿಂದ ರಚಿಸಿರುವ ಮರಳೂರು ಸರ್ವೆ ನಂಬರ್‌ನಲ್ಲಿ ನಿರ್ಮಿಸಲಾಗಿರುವ ಸಮುದಾಯ ಭವನವನ್ನು ಬಾಡಿಗೆ ನೀಡುವ ಬಗ್ಗೆ.

ಕ್ರ. ಸಂ	ಸ್ಥಳ	ವಿಸ್ತೀರ್ಣ ಚ.ಮೀ. ಗಳಲ್ಲಿ	ಕನಿಷ್ಠ ಮಾಸಿಕ ಪ್ರೀಮಿಯಂ ರೂ. ಗಳಲ್ಲಿ	ಪಾವತಿಸ ಬೇಕಾಗಿರುವ. ಇ.ಎಂ.ಡಿ. ಮೊತ್ತ ರೂ. ಗಳಲ್ಲಿ	ಪಾವತಿಸಬೇಕಾದ ಠೇವಣಿ ಮೊಬಲಗು ರೂ. ಗಳಲ್ಲಿ
1	ಮರಳೂರು ಸಮುದಾಯ ಭವನ	ಕೆಳ ಮಹಡಿ 6804 ಚ.ಅ ನೆಲಮಹಡಿ 6410 ಚ.ಅ 1ನೇ ಮಹಡಿ 4256 ಚ.ಅ ಹಾಗೂ ಪಾರ್ಕಿಂಗ್ ಸ್ಥಳ: 13000 ಚ.ಅ	3,00,000	6,48,000	21,60,000

ವೆಬ್‌ಸೈಟ್ : kppp.karnataka.gov.in ಹಾಗೂ **website:tumakuru.uda.gov.in** ನಲ್ಲಿ ಇ–ಹರಾಜಿನ ಸಂಬಂಧ ಷರತ್ತು, ನಿಯಮ, ನಿಬಂಧನೆಗಳ ವಿವರಗಳನ್ನು ಮೇಲ್ಕಂಡ ವೈಬ್‌ಸೈಟ್‌ನಲ್ಲಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಈ ಕಛೇರಿಯ ವೇಳೆಯಲ್ಲಿ ಮಾಹಿತಿಯನ್ನು ಪಡೆಯಬಹುದಾಗಿರುತ್ತದೆ ಮತ್ತು ಇ–ಹರಾಜಿಗೆ ಸಂಬಂಧಿಸಿದಂತೆ ಯಾವುದಾದರೂ ಬದಲಾವಣೆ ಇದ್ದಲ್ಲಿ ಇ–ಪ್ರಕ್ಯೂರ್‌ಮೆಂಟ್ ಪೋರ್ಟಲ್‌ನಲ್ಲಿ ಮಾತ್ರ ಪ್ರಕಟಿಸಲಾಗುವುದು, ಯಾವುದೇ ಪತ್ರಿಕಾ ಪ್ರಕಟಣೆಯನ್ನು ಹೊರಡಿಸಲಾಗುವುದಿಲ್ಲ.

ಸಹಿ/– (ಶುಭ ಕಲ್ಯಾಣ್) ಭಾ.ಆ.ಸೇ., ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿಗಳು, ನಗರಾಭಿವೃದ್ಧಿ ಪ್ರಾಧಿಕಾರ, ತುಮಕೂರು
ಸಹಿ/– (ಉಮೇಶ್‌ಚಂದ್ರ ಎನ್.ಆರ್.) ಕೆ.ಎ.ಎಸ್., ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರ, ತುಮಕೂರು
DIPR/TUM/RO-26/26-27/Oysters

ಗೇರು ಹಣ್ಣಿನ ಮೌಲ್ಯವರ್ಧನೆ ಮೂಲಕ ದೇಶದಲ್ಲಿ 80 ವರ್ಷದ ಬಳಿಕ ಗೇರು ಹಣ್ಣು ಕ್ರಾಂತಿ ಮಾಡುತ್ತಿದೆ. ನಮ್ಮ ಹಿರಿಯರು ಈ ಕೆಲಸವನ್ನು ಮಾಡಬೇಕಾಗಿತ್ತು. ಬ್ರಿಜಿಲ್‌ನಲ್ಲಿ ಒಟ್ಟು ಗೇರು ಹಣ್ಣಿನಲ್ಲಿ ಶೇ.75ರಲ್ಲಿ ಆದಾಯ ಪಡೆಯುತ್ತಿದ್ದಾರೆ.

• **ಶ್ರೀಪಡ್ರೆ**, ಗೇರು ಹಣ್ಣು ಮೌಲ್ಯವರ್ಧನೆಯ ರೂವಾರಿ.

ಕನ್ನಡಪ್ರಭ
ಶನಿವಾರ 9.05.2026
ಮಂಗಳೂರು

ಸುದ್ದಿ ಸಿಂಚನ

ದ.ಕ. ಜಿಲ್ಲಾಧಿಕಾರಿ ಕಚೇರಿಗೆ ಆಂಧ್ರಪ್ರದೇಶ ರಾಜ್ಯಪಾಲರ ಭೇಟಿ



ಮಂಗಳೂರು: ಆಂಧ್ರ ಪ್ರದೇಶದ ರಾಜ್ಯಪಾಲ ನ್ಯಾ. ಅಬ್ದುಲ್ ನಝೀರ್‌ಶುಕ್ರವಾರ ಮಂಗಳೂರಿನ ಪಡೀಲ್‌ನ ದ.ಕ. ಜಿಲ್ಲಾಧಿಕಾರಿ ಕಚೇರಿಗೆ ಭೇಟಿ ನೀಡಿದರು. ಜಿಲ್ಲಾಧಿಕಾರಿ ಎಚ್.ವಿ. ದರ್ಶನ್ ಅವರು ಆಂಧ್ರ ಪ್ರದೇಶದ ರಾಜ್ಯಪಾಲರನ್ನು ಸ್ವಾಗತಿಸಿದರು. ಜಿಲ್ಲಾಧಿಕಾರಿ ಕಚೇರಿಯ ವಿವಿಧ ವಿಭಾಗಗಳಿಗೆ ಭೇಟಿ ನೀಡಿದ ಅವರು ಹೊಸ ಕಚೇರಿಯ ನಿರ್ಮಾಣ ಹಾಗೂ ಶೈಲಿಯನ್ನು ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿದರು. ಹೆಚ್ಚುವರಿ ಜಿಲ್ಲಾಧಿಕಾರಿ ರಾಜು ಕೆ. ಇದ್ದರು.

ಗೇರು ಹಣ್ಣಿನ ಮೌಲ್ಯವರ್ಧನೆ ಕೃಷಿಕರಿಗೆ ಹೆಚ್ಚಿನ ಆದಾಯ: ಶ್ರೀಪಡ್ರೆ

ಕದ್ರಿ ಪಾರ್ಕ್‌ನಲ್ಲಿ ಮೂರು ದಿನಗಳ ಗೇರು–ಮಾವು ಮೇಳಕ್ಕೆ ಚಾಲನೆ | ಗೇರು ಹಣ್ಣಿನ ಜ್ಯೂಸ್‌ಗೆ ಭರ್ಜರಿ ಬೇಡಿಕೆ

• **ಕನ್ನಡಪ್ರಭ ವಾರ್ತೆ** ಮಂಗಳೂರು

ಗೇರು ಹಣ್ಣಿನ ಮೌಲ್ಯವರ್ಧನೆಯಿಂದ ಗೇರು ಬೀಜದ ಜೊತೆಗೆ ಗೇರು ಹಣ್ಣಿನಿಂದಲೂ ಆದಾಯ ಗಳಿಕೆ ಸಾಧ್ಯವಾಗುತ್ತಿದೆ. ಗೇರು ಹಣ್ಣಿನ ಜ್ಯೂಸ್‌ಗೆ ಉತ್ತಮ ವೇದಿಕೆ ಸಿಕ್ಕಲ್ಲಿ ಗೇರು ಬೀಜದ ಐದು ಪಟ್ಟು ಹೆಚ್ಚು ಆದಾಯ ಗೇರು ಹಣ್ಣಿನಿಂದ ಪಡೆಯಬಹುದಾಗಿದ್ದು, ಇದು ಗೇರು ಬೆಳೆಗಾರ ಕೃಷಿಕರ ಆದಾಯ ಹೆಚ್ಚಿಸಲಿದೆ ಎಂದು ಅಡಿಕೆ ಪತ್ರಿಕೆ ಸಂಪಾದಕ, ಗೇರು ಹಣ್ಣು ಮೌಲ್ಯವರ್ಧನೆಯ ರೂವಾರಿ ಶ್ರೀಪಡ್ರೆ ಹೇಳಿದರು.

ಅವರು ಶುಕ್ರವಾರ ಮಂಗಳೂರಿನ ಕದ್ರಿ ಪಾರ್ಕ್‌ನಲ್ಲಿ ರೈತ ಕುಡ್ಲ ಪ್ರತಿಷ್ಠಾನ ನೇತೃತ್ವದಲ್ಲಿ ಸಿರಿ ತೋಟಗಾರಿಕೆ ಸಂಘ ಮಂಗಳೂರು, ಸಾವಯವ ಕೃಷಿಕ ಗ್ರಾಹಕ ಬಳಗ ಮಂಗಳೂರು ಸಹಯೋಗದೊಂದಿಗೆ ಮೂರು ದಿನಗಳ ಕಾಲ ನಡೆಯುವ ಗೇರು, ಮಾವು, ಹಲಸು ಮೇಳ ಉದ್ಘಾಟಿಸಿ ಮಾತನಾಡಿದರು.

ಗೇರು ಹಣ್ಣಿನ ಮೌಲ್ಯವರ್ಧನೆ ಮೂಲಕ ದೇಶದಲ್ಲಿ 80 ವರ್ಷದ ಬಳಿಕ ಗೇರು ಹಣ್ಣು ಕ್ರಾಂತಿ ಮಾಡುತ್ತಿದೆ. ನಮ್ಮ ಹಿರಿಯರು ಈ ಕೆಲಸವನ್ನು ಮಾಡಬೇಕಾಗಿತ್ತು. ಬ್ರಿಜಿಲ್‌ನಲ್ಲಿ ಒಟ್ಟು ಗೇರು ಹಣ್ಣಿನಲ್ಲಿ ಶೇ.75ರಲ್ಲಿ ಆದಾಯ ಪಡೆಯುತ್ತಿದ್ದಾರೆ. ರೈತ ಕುಡ್ಲ ಪ್ರತಿಷ್ಠಾನ ಅರ್ಥಮಾಡಿಕೊಂಡು ಗೇರು ಹಣ್ಣಿನ ಮೌಲ್ಯವರ್ಧನೆಯ ಕಾರ್ಯಕ್ರಮ ಮಾಡಲಾಗುತ್ತಿದೆ. ಗೇರು ಅಭಿವೃದ್ಧಿ ಸಂಸ್ಥೆಗಳು ಉತ್ಪನ್ನಗಳನ್ನು ಮಾಡಿದರು ಅದನ್ನು ಪ್ರಚಾರ ಪಡಿಸುವಲ್ಲಿ ವಿಫಲವಾಗಿದೆ. ಗೇರು ಹಣ್ಣಿನ ಮೌಲ್ಯವರ್ಧನೆ ಬಗ್ಗೆ ವೇದಿಕೆ ಇರಲಿಲ್ಲ. ಇದೀಗ ಗೇರುಹಣ್ಣಿನ ಜ್ಯೂಸ್, ಮೌಲ್ಯವರ್ಧಿತ ಉತ್ಪನ್ನಗಳ ಬಗ್ಗೆ ಕಾರ್ಯಾಗಾರ ಆಯೋಜಿಸಿ ಪ್ರೇರಣೆ ನೀಡುತ್ತಿರುವುದರಿಂದ ಇಂದು ಗೇರು ಹಣ್ಣಿನ ಜ್ಯೂಸ್ ಕ್ರಾಂತಿ ಮಾಡುವ ಹಂತಕ್ಕೆ ಬಂದಿದೆ. ಮುಂದಿನ ದಿನಗಳಲ್ಲಿ ಗೇರು ಹಣ್ಣಿನ ಜ್ಯೂಸ್ ಸ್ಥಳೀಯ ಮಾರುಕಟ್ಟೆಯಿಂದ ಹಿಡಿದು ರಾಷ್ಟ್ರ ರಾಜಧಾನಿಯ ಮಾರುಕಟ್ಟೆಗೂ ಲಗ್ಗೆ ಇಡಲಿದೆ. ಗೇರು ಹಣ್ಣಿನಲ್ಲಿ ಔಷಧೀಯ ಗುಣಗಳೂ ಇದೆ ಎಂದರು.

ರೈತ ಕುಡ್ಲ ಪ್ರತಿಷ್ಠಾನ ಅಧ್ಯಕ್ಷ ಭರತ್‌ರಾಜ್ ಸೊರಕೆ ಅಧ್ಯಕ್ಷತೆ ವಹಿಸಿದ್ದರು. ಸಿರಿತೋಟಗಾರಿಕೆ ಸಂಘದ ಕೋಶಾಧಿಕಾರಿ ಹರಿಶ್ಚಂದ್ರ ಅಡ್ಕ, ಮಂಗಳೂರು ಸಾವಯವ ಕೃಷಿಕ ಗ್ರಾಹಕ ಬಳಗದ ಕಾರ್ಯದರ್ಶಿ ರತ್ನಾಕರ ಕುಳಾಯಿ, ಕದ್ರಿ ಉದ್ಯಾನವನ ಅಭಿವೃದ್ಧಿ ಸಮಿತಿ ಕಾರ್ಯಕಾರಿ ಸದಸ್ಯರಾದ ಜಗನ್ನಾಥ ಗಾಂಭೀರ್, ಜಿ.ಕೆ.ಭಟ್, ರಾಮ ಮೊಗರೋಡಿ, ಕದ್ರಿ ಪಾರ್ಕ್‌ನ ರೂಪೇಶ್ ಮತ್ತಿತರರು ಇದ್ದರು.



ಗೇರು, ಮಾವು, ಹಲಸು ಮೇಳ ಕಾರ್ಯಕ್ರಮದ ಉದ್ಘಾಟನಾ ಹಾಗೂ ಸ್ಟಾಲ್‌ನ ಪೋಟೋಗಳು

- ಗೇರು, ಮಾವು, ಹಲಸು ಮೇಳಕ್ಕೆ ಶುಕ್ರವಾರ ಬೆಳಗ್ಗೆಯಿಂದಲೇ ಗ್ರಾಹಕರು ಆಗಮಿಸಿ ಪ್ರದರ್ಶನಗಳನ್ನು ವೀಕ್ಷಿಸಿದರು. ಮೇಳದಲ್ಲಿ ವಿವಿಧ ಸ್ಟಾಲ್‌ಗಳನ್ನು ಹಾಕಲಾಗಿದ್ದು, ಅದರಲ್ಲಿ ಗೇರು, ಗೇರು ಹಣ್ಣಿನ ಉತ್ಪನ್ನಗಳು, ಬಗೆ ಬಗೆಯ ಮಾವು, ಮಾವಿನ ಉತ್ಪನ್ನಗಳು, ಹಲಸು, ಹಲಸಿನ ಉತ್ಪನ್ನಗಳು ಸೇರಿದಂತೆ ವಿವಿಧ ಪ್ರದರ್ಶನಗಳನ್ನು ಮಾಡಲಾಗಿತ್ತು.
- ಪುತ್ತೂರು ಗೇರು ಸಂಶೋಧನಾಲಯದ ಸ್ಟಾಲ್‌ನಲ್ಲಿ ಗೇರು ಗಿಡ, ಗೇರಿನ ಉತ್ಪನ್ನಗಳು, ಗೇರು ಹಣ್ಣಿನ ಉತ್ಪನ್ನಗಳ ಪ್ರದರ್ಶನ ಮಾಡಲಾಗಿತ್ತು. ಸ್ಟಾಲ್‌ಗಳಲ್ಲಿ ಗೇರು ಹಣ್ಣಿನ ಜ್ಯೂಸ್‌ಗಳು ಹೆಚ್ಚಿನ ಪ್ರಮಾಣದಲ್ಲಿ ಗ್ರಾಹಕರ ಆಕರ್ಷಣೆಯ ಕೇಂದ್ರವಾಗಿತ್ತು.

ಕದ್ರಿ ಗೇರುಮೇಳದಲ್ಲಿ ಗಮನಸೆಳೆಯಿತು 2.5 ಲಕ್ಷ ರು.ಗಳ ಮಾವಿನ ಹಣ್ಣು

- ಮೇಳದಲ್ಲಿ ವಿಶೇಷವಾಗಿ ಗಮನ ಸೆಳೆದದ್ದು, ಜಪಾನ್‌ನ ಮಿಯಾಜಾಕಿ ಎಂಬ ಕೆ.ಜಿಗೆ 2.5 ಲಕ್ಷ ರು. ಬೆಲೆಯಿರುವ ಮಾವಿನ ಹಣ್ಣು. ಈ ಹಣ್ಣನ್ನು ಮೇಳದಲ್ಲಿ ಒಂದು ಪೀಸ್‌ಗೆ (ಸಣ್ಣ ಭಾಗ) 2 ಸಾವಿರ ರು.ನಂತೆ ಮಾರಾಟ ಮಾಡಲಾಗಿದೆ. ಹೊನ್ನಾವರ ಮೂಲದ ವ್ಯಾಪಾರಿಯೊಬ್ಬರು ಈ ಮಾವು ಮಾರಾಟ ಮಾಡುತ್ತಿದ್ದು, ಗ್ರಾಹಕರು ಇದರ ಬಗ್ಗೆ ಹೆಚ್ಚಿನ ಮಾಹಿತಿ ಪಡೆಯುತ್ತಿರುವುದು ಕಂಡುಬಂತು.





ಗೇರುಮೇಳದಲ್ಲಿ ಕಂಡ ಗೇರು ಹಣ್ಣುಗಳು (1) ನೇರಳೆ ಹಣ್ಣು ಖರೀದಿ ಭರಾಟೆ (2).

ಖಂಡಿಗೆ ಕಂಡೇವುದ ಆಯನ 15 ರಂದು

• **ಕನ್ನಡಪ್ರಭವಾರ್ತೆ** ಮೂಲ್ಕಿ

ಮುಕ್ಕ ಸಮೀಪದ ಚೇಳ್ಯೆರು ಖಂಡಿಗೆ ಧರ್ಮರಸು ಶ್ರೀ ಉಳ್ಳಾಯ ದೈವಸ್ಥಾನದಲ್ಲಿ ಕಂಡೇವುದ ಆಯನವು 15, 16ರಂದು 15 ರ ಬೆಳಿಗ್ಗೆ 7ಕ್ಕೆ ಖಂಡಿಗೆ ನಂದಿನಿ ನದಿಯಲ್ಲಿ ಮೀನು ಹಿಡಿಯುವಿಕೆ, 11ಕ್ಕೆ ಸಂಕ್ರಮಣ ಪೂಜೆ, ಮಧ್ಯಾಹ್ನ ಅನ್ನಸಂತರ್ಪಣೆ, ರಾತ್ರಿ ಮಹಾ ಅನ್ನಸಂತರ್ಪಣೆ, ಸಂಜೆ 5.30ಕ್ಕೆ ಯಕ್ಷಮಣಿ ಕಲಾ ತಂಡ ಚೇಳ್ಯೆರು ಅವರಿಂದ ಪಾಂಚ ಜನ್ಯ ಯಕ್ಷಗಾನ ಬಯಲಾಟ, ರಾತ್ರಿ 9ಕ್ಕೆ ಬ್ರಹ್ಮಸ್ಥಾನದಲ್ಲಿ ಬ್ರಹ್ಮರಿಗೆ ತಂಬಿಲ, ಕುಮಾರ ಸಿರಿಗಳ ದರ್ಶನ, ಧರ್ಮರಸು ಶ್ರೀ ಉಳ್ಳಾಯ ಹಾಗೂ ಪರಿವಾರ ದೈವಗಳ ಭಂಡಾರ ಮೂಲಸ್ಥಾನಕ್ಕೆ ಹೋಗುವುದು, ಸಿಡಿಮದ್ದು ಪ್ರದರ್ಶನ, ಧ್ವಜಾರೋಹಣ,16 ರ ಬೆಳಿಗ್ಗೆ 5 ಕ್ಕೆ ಧರ್ಮರಸು ಶ್ರೀ ಉಳ್ಳಾಯ. ಇಷ್ಟದೇವತೆ, ಬಬ್ಬರ್ಯ ಹಾಗೂ ಪರಿವಾರ ದೈವಗಳ ನೇಮೋತ್ಸವ ನಂತರ ನಂದಿಗೋಣ, ಕುಮಾರ ಸಿರಿಗಳ ಭೇಟಿ,7ಕ್ಕೆ ನಾಗದೇವರಿಗೆ ಭಕ್ತಾದಿಗಳಿಂದ ತಂಬಿಲ ಸೇವೆ, ಸಂಜೆ 4.30ಕ್ಕೆ ಬಾಕಿಮಾರು ಗದ್ದೆಯಲ್ಲಿ ಚೆಂಡು, 6ಕ್ಕೆ ಜಾರಂದಾಯ, ಬಂಟ, ಕೊಡಮಣಿತ್ತಾಯ ದೈವಗಳಿಗೆ ಜೋಡಿ ನೇಮೋತ್ಸವ ನಡೆಯಲಿದೆ. ಬಾಕಿಲ್ ದಾಂತಿ ಕೋಡ್ದಬ್ಬು ದೈವಸ್ಥಾನದ ಕೋಡ್ದಬ್ಬು ಮತ್ತು ಧೂಮಾವತಿ ದೈವದ ಭೇಟಿ, 7.30ಕ್ಕೆ ಶ್ರೀ ಉಳ್ಳಾಯ ಹಾಗೂ ಪರಿವಾರ ದೈವಗಳಿಗೆ ಸಾಮೂಹಿಕ ಹೂವಿನ ಪೂಜೆ, ಮಧ್ಯಾಹ್ನ ಸಾರ್ವಜನಿಕ ಅನ್ನಸಂತರ್ಪಣೆ, ರಾತ್ರಿ 8 ಕ್ಕೆ ಪೆರ್ಮದ ಕಲಾವಿದೆರ್ ಚೇಳ್ಯಾರು ಅವರಿಂದ ಎನ್ನಿಲೆಕ್ಕ ಇಜ್ಜೆರ್ ತುಳು ನಾಟಕ ಪ್ರದರ್ಶನ, 8ಕ್ಕೆ ಧ್ವಜಾವರೋಹಣ, ಖಂಡಿಗೆ ಬೀಡಿಗೆ ಭಂಡಾರ ನಿರ್ಗಮನವಾಗಲಿದೆಯೆಂದು ಎಂದು ಚೇಳ್ಯೆರು ಖಂಡಿಗೆ ಧರ್ಮರಸು ಶ್ರೀ ಉಳ್ಳಾಯ ದೈವಸ್ಥಾನ ಪ್ರಕಟಣೆ ತಿಳಿಸಿದೆ.